ಸಂಪುಟ: 06 ಸಂಚಿಕೆ: 168 ಪುಟಗಳು: 08 ಭಾನುವಾರ 30 ಆಗಸ್ಟ್ 2026

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ನಮ್ಮ ಜೀವನವನ್ನೇ ಬದಲಾಯಿಸಬಲ್ಲ ಎಲ್ಲಾ ಸಾಧ್ಯತೆಗಳನ್ನು ಹೊಂದಿದ ಒಬ್ಬ ವ್ಯಕ್ತಿಯನ್ನು ಕಾಣಲು ದೂರ ಹೋಗಬೇಕಿಲ್ಲ. ಕನ್ನಡಿಯ ಮುಂದೆ ನಿಂತರೆ ಸಾಕು.

## ಪಂಚಾಯಿತಿ ವ್ಯಾಪ್ತಿಯ ಕೆರೆಗಳ ಒತ್ತುವರಿ ತೆರವಿಗೆ ಕೈಗೊಂಡಿರುವ ಕ್ರಮಗಳ ಮಾಹಿತಿ ನೀಡುವಂತೆ ಸಚಿವ ಈಶ್ವರ ಖಂಡ್ರೆ ಸೂಚನೆ

• ಉದಯವಾಹಿನಿ, ಬೆಂಗಳೂರು



ಕೆರೆಗಳು ಗ್ರಾಮೀಣ ಪ್ರದೇಶದ ಜನರ ಜೀವನಾಡಿಯಾಗಿದ್ದು, ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿರುವ ಕೆರೆಗಳ ಒತ್ತುವರಿ ತೆರವಿಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ ಮುಂದಾಗಿದ್ದಾರೆ.

ಈ ಸಂಬಂಧ ಇಲಾಖೆಯ ಕಾರ್ಯದರ್ಶಿಯವರಿಗೆ ಲಿಖಿತ ಸೂಚನೆ ನೀಡಿರುವ ಅವರು, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆಯ ವ್ಯಾಪ್ತಿಯಲ್ಲಿರುವ ಮತ್ತು ಇಲಾಖೆಯ ನಿರ್ವಹಣೆಯಲ್ಲಿರುವ ಕೆರೆಗಳ ಸಂಖ್ಯೆ ಮತ್ತು ಯಾವ ಯಾವ ಕೆರೆಗಳ ಎಷ್ಟು ಪ್ರದೇಶ ಒತ್ತುವರಿಯಾಗಿದೆ, ಈ ಒತ್ತುವರಿ ತೆರವಿಗೆ ಕೈಗೊಂಡಿರುವ ಕ್ರಮಗಳೇನು ಎಂಬ ಸಂಪೂರ್ಣ ಮಾಹಿತಿಯನ್ನು 10 ದಿನಗಳ ಒಳಗಾಗಿ ಸಲ್ಲಿಸುವಂತೆ ಸೂಚಿಸಿದ್ದಾರೆ.

ಮುಂದಿನ 30 ವರ್ಷಗಳಲ್ಲಿ ಗ್ರಾಮೀಣ ಪ್ರದೇಶದಲ್ಲಿ ಹೆಚ್ಚಳವಾಗುವ ಜನಸಂಖ್ಯೆಯನ್ನು ದೃಷ್ಟಿಯಲ್ಲಿಟ್ಟುಕೊಂಡು ಮೇಲ್ಮೈ ನೀರಿನಿಂದ ಶುದ್ಧ ಕುಡಿಯುವ ನೀರು ಪೂರೈಕೆಗೆ ಸರ್ಕಾರ ಯೋಜನೆ ರೂಪಿಸಿದ್ದು, ಈ ನಿಟ್ಟಿನಲ್ಲಿ ಪ್ರಮುಖ ಸಿಹಿ ನೀರಿನ ಮೂಲಗಳಾದ ಕೆರೆ, ಸರೋವರಗಳ ಸಂರಕ್ಷಣೆ ಅತ್ಯಗತ್ಯ ಮತ್ತು ಅನಿವಾರ್ಯವಾಗಿದೆ ಎಂದು ತಮ್ಮ ಪತ್ರದಲ್ಲಿ ಈಶ್ವರ ಖಂಡ್ರೆ ತಿಳಿಸಿದ್ದಾರೆ. ನಾಗರಿಕತೆಯ ವಿಕಾಸದಲ್ಲಿ ಕೆರೆಗಳು ಮಹತ್ವದ ಪಾತ್ರವಹಿಸುತ್ತಿದ್ದು, ಭೂಮಿಯ ಮೇಲಿರುವ ಸಿಹಿ ನೀರಿನ ಮೂಲವಾದ ಕೆರೆ ಮತ್ತು ಸರೋವರಗಳ ರಕ್ಷಣೆ, ಸುಸ್ಥಿರ ನಿರ್ವಹಣೆ ಹಾಗೂ ಪರಿಸರ ವ್ಯವಸ್ಥೆಯಲ್ಲಿ ಅವುಗಳ ಪಾತ್ರದ ಕುರಿತು ಜಾಗತಿಕವಾಗಿ ಜಾಗೃತಿ ಮೂಡಿಸುವ ಉದ್ದೇಶದಿಂದ ಪ್ರತಿ ವರ್ಷ ಆ. 27 ರಂದು ಆಚರಿಸಲಾಗುವ ವಿಶ್ವ ಕೆರೆ ದಿನದಂದು ಸಚಿವರು ಈ ಸೂಚನೆ ನೀಡಿದ್ದಾರೆ.

## ಹೊಸೂರು ಹೆದ್ದಾರಿಯಲ್ಲಿ ಧಗಧಗನೇ ಹೊತ್ತಿ ಉರಿದ ಕಾರು




• ಉದಯವಾಹಿನಿ, ಬೆಂಗಳೂರು

ಹೆದ್ದಾರಿಯಲ್ಲಿ ಕಾರೊಂದು ಧಗಧಗನೇ ಹೊತ್ತಿ ಉರಿದಿರುವ ಘಟನೆ ಬೆಂಗಳೂರು ಹೊರವಲಯ ಆನೇಕಲ್ ತಾಲ್ಲೂಕಿನ ಹೊಸೂರು ಮುಖ್ಯ ರಸ್ತೆ ನೆರಳೂರು ಗೇಟ್ ಬಳಿ ನಡೆದಿದೆ. ಚಲಿಸುತ್ತಿದ್ದ ಕಾರಿನ ಎಂಜಿನ್‌ನಲ್ಲಿ ಹೊಗೆ ಕಾಣಿಸಿಕೊಂಡಿದೆ. ಕೂಡಲೇ ಕಾರು ರಸ್ತೆ ಬದಿ ನಿಲ್ಲಿಸಿ ಪರಿಶೀಲನೆ ನಡೆಸಿದ್ದಾರೆ.

ಈ ವೇಳೆ ಹೊಗೆ ಜೊತೆ ಬೆಂಕಿ ಕಿಡಿ ಕಾಣಿಸಿಕೊಂಡಿದೆ. ಈ ವೇಳೆ ಪೆಟ್ರೋಲ್ ಬಂಕ್ ಸಿಬ್ಬಂದಿ ಬೆಂಕಿ ನಂದಿಸಲು ಪರದಾಡಿದರು. ನೋಡನೋಡುತ್ತಿದ್ದಂತೆ ಇಡೀ ಕಾರಿಗೆ ಬೆಂಕಿ ಆವರಿಸಿದ್ದು, ಕಾರು ಸಂಪೂರ್ಣ ಬೆಂಕಿಗಾಹುತಿಯಾಗಿದೆ. ಘಟನಾ ಸ್ಥಳಕ್ಕೆ ಅತ್ತಿಬೆಲೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

## ಬಿಟ್ ಕಾಯಿನ್ ಹಗರಣ ಹ್ಯಾಕರ್ ಶ್ರೀಕಿ, ರಾಬಿನ್ ಖಂಡೇವಾಲ ಜಾಮೀನು ಅರ್ಜಿ ವಜಾ

• ಉದಯವಾಹಿನಿ, ಬೆಂಗಳೂರು

ಬಿಟ್ ಕಾಯಿನ್ ಹಗರಣ ಪ್ರಕರಣದಲ್ಲಿ ಆರೋಪಿಗಳಾಗಿರುವ ಹ್ಯಾಕರ್ ಶ್ರೀಕಿ ಹಾಗೂ ರಾಬಿನ್ ಖಂಡೇವಾಲ ಸಲ್ಲಿಸಿದ್ದ ಜಾಮೀನು ಅರ್ಜಿಯನ್ನು ಇ.ಡಿ ವಿಶೇಷ ನ್ಯಾಯಾಲಯ ವಜಾಗೊಳಿಸಿದೆ. ಬಿಟ್ ಕಾಯಿನ್ ಹಗರಣಕ್ಕೆ ಸಂಬಂಧಿಸಿದಂತೆ ಇ.ಡಿ ಅಧಿಕಾರಿಗಳು ತನಿಖೆ ನಡೆಸುತ್ತಿದ್ದು, ಕೆಲ ತಿಂಗಳ ಹಿಂದೆ ಪ್ರಕರಣ ದಾಖಲಿಸಿಕೊಂಡು ಹಲವು ಆರೋಪಿಗಳ ಮನೆಗಳ ಮೇಲೆ ದಾಳಿ ನಡೆಸಿದ್ದರು. ಈ ಪ್ರಕರಣದಲ್ಲಿ ಹ್ಯಾಕರ್ ಶ್ರೀಕಿ, ರಾಬಿನ್ ಖಂಡೇವಾಲ ಹಾಗೂ ಸುಖೇಶ್ ಹೆಗ್ಡೆ ಅವರನ್ನು ಇ.ಡಿ ಅಧಿಕಾರಿಗಳು ಬಂಧಿಸಿದ್ದರು.

ಕಾಂಗ್ರೆಸ್ ಯುವ ನಾಯಕ ಮೊಹಮ್ಮದ್ ನಲಪಾಡ್, ಶ್ರೀಕಿ, ರಾಬಿನ್ ಖಂಡೇವಾಲ ಹಾಗೂ ಸುಖೇಶ್ ಹೆಗ್ಡೆ ಅವರ ನಿವಾಸಗಳ ಮೇಲೂ ಇ.ಡಿ ದಾಳಿ ನಡೆಸಿತ್ತು. ನಿಖೆ ಪೂರ್ಣಗೊಳಿಸಿದ ಬಳಿಕ ಮೊಹಮ್ಮದ್ ನಲಪಾಡ್ ಸೇರಿದಂತೆ ಆರೋಪಿಗಳ ವಿರುದ್ಧ ಇ.ಡಿ ಅಧಿಕಾರಿಗಳು ನ್ಯಾಯಾಲಯಕ್ಕೆ ಚಾರ್ಜ್‌ಶೀಟ್ ಸಲ್ಲಿಸಿದ್ದರು. ಚಾರ್ಜ್‌ಶೀಟ್ ಸಲ್ಲಿಕೆಯ ಕೆಲ ದಿನಗಳ ಬಳಿಕ ಶ್ರೀಕಿ ಹಾಗೂ ರಾಬಿನ್ ಖಂಡೇವಾಲ ಜಾಮೀನು ಕೋರಿ ಪ್ರತ್ಯೇಕವಾಗಿ ಅರ್ಜಿ ಸಲ್ಲಿಸಿದ್ದರು.

## ತಪ್ಪಿಗೆ ಜಾತಿಯ ಬಣ್ಣ ಹಚ್ಚುವುದು ಸರಿಯಲ್ಲ

• ಉದಯವಾಹಿನಿ, ಬೆಂಗಳೂರು

ವಾಲ್ಮೀಕಿ ನಿಗಮದ ಹಗರಣದ ಹಿನ್ನೆಲೆಯಲ್ಲಿ ಸಚಿವ ಬಿ. ನಾಗೇಂದ್ರ ಅವರ ರಾಜೀನಾಮೆ ಕರ್ನಾಟಕ ರಾಜಕಾರಣದಲ್ಲಿ ಹೊಸ ಚರ್ಚೆಗೆ ಕಾರಣವಾಗಿದೆ. ಕೆ.ಎನ್. ರಾಜಣ್ಣ ಅವರು ಈ ಕುರಿತು ಮಾತನಾಡಿ, ಎಸ್.ಟಿ. ನಾಯಕರನ್ನೇ ಗುರಿಯಾಗಿಸಲಾಗುತ್ತಿದೆ ಎಂದು ಆತಂಕ ವ್ಯಕ್ತಪಡಿಸಿದ್ದಾರೆ. ತಪ್ಪು ಯಾರೇ ಮಾಡಿದ್ದರೂ ಅದಕ್ಕೆ ಜಾತಿ ಬಣ್ಣ ಕಟ್ಟುವ ಪ್ರಯತ್ನ ಸರಿಯಲ್ಲ ಎಂದಿರುವ ರಾಜಣ್ಣ, ಆದರೂ ಜನರಲ್ಲಿ ಎಸ್.ಟಿ. ನಾಯಕರನ್ನು ಟಾರ್ಗೆಟ್ ಮಾಡಲಾಗುತ್ತಿದೆ ಎಂಬ ಭಾವನೆ ಮೂಡಿದೆ . ಬಿಜೆಪಿ ನಡೆಸುತ್ತಿರುವ ಪಾದಯಾತ್ರೆ ಕುರಿತು ಪ್ರತಿಕ್ರಿಯಿಸಿದ ರಾಜಣ್ಣ, ಇದು ಎಸ್.ಟಿ. ಕ್ಷೇತ್ರಗಳನ್ನು ಗುರಿಯಾಗಿಸಿಕೊಂಡು ರಾಜಕೀಯ ಲಾಭಕ್ಕಾಗಿ ಮಾಡುವ ಪ್ರಯತ್ನ ಎಂದು ಟೀಕಿಸಿದ್ದಾರೆ. ಕಾಂಗ್ರೆಸ್ ಗೆದ್ದಿರುವ ಎಸ್.ಟಿ. ಕ್ಷೇತ್ರಗಳನ್ನು ಮುಂದಿನ ಚುನಾವಣೆಯಲ್ಲಿ ಗೆಲ್ಲುವ ಉದ್ದೇಶದಿಂದ ಪಾದಯಾತ್ರೆಗಳನ್ನು ಆಯೋಜಿಸಲಾಗಿದೆ ಎಂದಿದ್ದಾರೆ. ನಾಗೇಂದ್ರ ಅವರ ರಾಜೀನಾಮೆಯಿಂದ ತೆರವಾಗಿರುವ ಸಚಿವ ಸ್ಥಾನಗಳನ್ನು ಸಮುದಾಯದವರೇ ತುಂಬಬೇಕು ಎಂದು ರಾಜಣ್ಣ ಆಗ್ರಹಿಸಿದ್ದಾರೆ.

# ಭಾರತ ಉತ್ಪಾದನೆಯಲ್ಲಿ ಭರ್ಜರಿ ವಿಶ್ವಕ್ಕೆ ಮಾದರಿ

ವಿಕಸಿತ ಭಾರತ



ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಭಾರತ ವಿಶ್ವದ 13ನೇ ರಾಷ್ಟ್ರವಾಗಿ ಹೊರಹೊಮ್ಮಿದ್ದು, ನಮ್ಮ ಮಾಪನ ಮಾನದಂಡಗಳು ಜಾಗತಿಕವಾಗಿ ಮಾನ್ಯತೆ ಪಡೆದಿವೆ. ಮತ್ತು ವಿಶ್ವಾದ್ಯಂತ ಹೆಚ್ಚು ಹೆಚ್ಚು ಸ್ವೀಕರಿಸಲ್ಪಡುತ್ತಿವೆ. ಇದು ಮಾಪನಶಾಸ್ತ್ರಕ್ಷೇತ್ರದಲ್ಲಿ ಭಾರತದ ಸಾಮರ್ಥ್ಯ, ವಿಶ್ವಾಸಾರ್ಹತೆ ಮತ್ತು ಜಾಗತಿಕ ನಾಯಕತ್ವವನ್ನು ಪ್ರತಿಬಿಂಬಿಸುವ ಮಹತ್ವದ ಮೈಲುಗಲ್ಲಾಗಿದೆ ಎಂದು ಪ್ರಲ್ಹಾದ ಜೋಶಿ ಹೇಳಿದರು.ಚೆನ್ನೈನಲ್ಲಿ ಸೌರ ವಾಟರ್-ಹೀಟರ್ ಪರೀಕ್ಷೆಯಿಂದ ಹಿಡಿದು ರಕ್ಷಣಾ ರಫ್ತು ಮತ್ತು ಖಾಸಗಿ ಬಾಹ್ಯಾಕಾಶ ಉಡಾವಣೆಗಳಲ್ಲಿ ಭಾರತದ ಬೆಳವಣಿಗೆ, ಉತ್ಪಾದನಾ ವ್ಯವಸ್ಥೆಯನ್ನು ವೇಗವಾಗಿ ಬಲಪಡಿಸುತ್ತಿದೆ ಎಂದು ಸಚಿವರು ಹೇಳಿದರು.

## ಸಚಿವ ಪ್ರಹ್ಲಾದ್ ಜೋಶಿ ಸಲಹೆ

## ಜಾಗತಿಕ ನಾಯಕತ್ವದತ್ತ ಭಾರತ ಮಹತ್ವದ ಮೈಲುಗಲ್ಲು - ಜೋಶಿ

### ಜಾಗತಿಕ ಮಟ್ಟದಲ್ಲಿ ವಿಶ್ವಾಸಾರ್ಹತೆ ಹೆಚ್ಚಿಸಿಕೊಂಡಿದೆ




ದೇಶದಲ್ಲೇ ಮೊದಲ ಬಾರಿಗೆ ಅಂತಾರಾಷ್ಟ್ರೀಯ ಮಟ್ಟದ ಏರೋಸ್ಪೇಸ್ ಮತ್ತು ರಕ್ಷಣಾ ಸಾಮಗ್ರಿಗಳ ಪರೀಕ್ಷಾ ಕೇಂದ್ರವನ್ನು ಕರ್ನಾಟಕದಲ್ಲಿ ಸ್ಥಾಪಿಸಿರುವುದು ಹೆಮ್ಮೆಯ ವಿಚಾರವಾಗಿದೆ. ದೇಶೀಯ ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳಿಗೆ ಹಾಗೂ ನವೋದ್ಯಮಗಳಿಗೆ ಸಹಾಯ ಮಾಡುವ ಮಹತ್ವದ ಯೋಜನೆಯಯಾಗಿದೆ ಎಂದು ತಿಳಿಸಿದರು. ಬೆಂಗಳೂರು ಏರೋಸ್ಪೇಸ್ ವಲಯ ಹಾಗೂ ಹೆಚ್‌ಎಎಲ್ ನಂತಹ ಸಂಸ್ಥೆಗಳ ಕೇಂದ್ರವಾಗಿದೆ.ಹೆಚ್‌ಎಎಲ್ ಹಾಗೂ ಏರೋಸ್ಪೇಸ್ ವಲಯಕ್ಕೆ ಅಗತ್ಯ ಉಪಕರಣ ಮತ್ತು ಸಾಮಗ್ರಿ ಸರಬರಾಜು ಮಾಡುವ ಎಂಎಸ್‌ಎಂಇಗಳು ಈ ಹಿಂದೆ ಪರೀಕ್ಷೆಗಾಗಿ ಖಾಸಗಿ ಸಂಸ್ಥೆಗಳು ಅಥವಾ ವಿದೇಶಗಳನ್ನೇ ನೆಚ್ಚಿಕೊಳ್ಳಬೇಕಾಗಿತ್ತು.

ಶೋಭಾ ಕರಂದ್ಲಾಜೆ ಕೇಂದ್ರದ ಕಾರ್ಮಿಕ ಇಲಾಖೆಯ ರಾಜ್ಯ ಸಚಿವೆ



• ಉದಯವಾಹಿನಿ, ಬೆಂಗಳೂರು




ಉತ್ತಮ ಗುಣಮಟ್ಟವೇ ಬಲಶಾಲಿ ಭಾರತದ ತಳಹದಿಯಾಗಿದ್ದು, ದೇಶದಲ್ಲಿ ಉತ್ಪಾದನಾ ವಲಯವನ್ನು ಬಲಪಡಿಸಲು ಮತ್ತು ಗುಣಮಟ್ಟ ಕಾಯ್ದುಕೊಳ್ಳುವ ಸಲುವಾಗಿ ಪರೀಕ್ಷೆಗೊಳಪಡಿಸುವುದು ಅತ್ಯಗತ್ಯವಾಗಿದೆ ಎಂದು ಕೇಂದ್ರ ಶಿಕ್ಷಣ ಮತ್ತು ಗ್ರಾಹಕ ವ್ಯವಹಾರಗಳು ಮತ್ತು ನಾಗರಿಕ ಸರಬರಾಜು ಇಲಾಖೆ ಸಚಿವ ಪ್ರಹ್ಲಾದ್ ಜೋಶಿ ತಿಳಿಸಿದರು. ನಗರದಲ್ಲಿ ನ್ಯಾಷನಲ್ ಟೆಸ್ಟ್ ಹೌಸ್ (ರಾಷ್ಟ್ರೀಯ ಮಾಪನ ಕೇಂದ್ರ) ವತಿಯಿಂದ ನೂತನವಾಗಿ ನಿರ್ಮಾಣವಾಗಿರುವ ಪರೀಕ್ಷಾ ಕೇಂದ್ರದ ಉದ್ಘಾಟನೆ ಮತ್ತು ಕೇಂದ್ರದ 115ನೇ ಸಂಸ್ಥಾಪನಾ ದಿನಾಚರಣೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು. 1912ರಲ್ಲಿ (ಸುಮಾರು 112-115 ವರ್ಷಗಳ ಹಿಂದೆ) ಬ್ರಿಟಿಷರ ಕಾಲದಲ್ಲಿ ಸ್ಥಾಪನೆಯಾಗಿದ್ದ ಎನ್‌ಟಿಹೆಚ್ ಸಂಸ್ಥೆಯನ್ನು 2012ರ ವೇಳೆಗೆ ಮುಚ್ಚಲು ನಿರ್ಧರಿಸಲಾಗಿತ್ತು. ಆದರೆ, ಪ್ರಧಾನಿ ನರೇಂದ್ರ ಮೋದಿ ಅವರ ದೂರದೃಷ್ಟಿಯಿಂದ ಮೇಕ್ ಇನ್ ಇಂಡಿಯಾ' ಮತ್ತು ಉತ್ಪಾದನಾ ರಂಗಕ್ಕೆ ಬೆಂಬಲ ನೀಡಲು ಈ ಸಂಸ್ಥೆಗೆ ಮರುಜೀವ ನೀಡಿ ಬೆಳೆಸಲಾಗಿದೆ ಎಂದು ಹೇಳಿದರು.

ಇತ್ತೀಚಿನ ದಿನಗಳಲ್ಲಿ ಇವಿ ವಾಹನಗಳಲ್ಲಿ ಬೆಂಕಿ ಕಾಣಿಸಿಕೊಳ್ಳುವುದು ಹಾಗೂ ಬ್ಯಾಟರಿ ಸಮಸ್ಯೆಗಳು ಹೆಚ್ಚಾಗುತ್ತಿವೆ. ಮಾನವ ಜೀವದ ಸುರಕ್ಷತೆ ಖಚಿತಪಡಿಸಿಕೊಳ್ಳುವುದಕ್ಕಾಗಿ ಅತ್ಯಾಧುನಿಕ ಇವಿ ಬ್ಯಾಟರಿ ಪರೀಕ್ಷಾ ಕೇಂದ್ರವನ್ನು ಬೆಂಗಳೂರಿನಲ್ಲಿ ಆರಂಭಿಸಲಾಗಿದೆ ಎಂದರು. ಕೇವಲ ನಿರ್ಮಾಣ ಮಾಡುವುದು ಸಾಧನೆಯಲ್ಲ. ಲೋಪದೋಷಗಳನ್ನು ಮುಂಚಿತವಾಗಿಯೇ ಊಹಿಸಿ, ಅವುಗಳನ್ನು ತಡೆಯುವುದು ಇಂಜಿನಿಯರಿಂಗ್‌ನ ನಿಜವಾದ ಜಾಣ್ಮೆ ಎಂಬ ಭಾರತ ರತ್ನ ಸರ್ ಎಂ ವಿಶ್ವೇಶ್ವರಯ್ಯ ಅವರನ್ನು ಸ್ಮರಿಸಿದರು. ಈ ಕೇಂದ್ರ ಸರ್ಕಾರವು ಗತಿ ಶಕ್ತಿ ಯೋಜನೆಯ ಆಶಯದಂತೆ ಈ ಕೇಂದ್ರವನ್ನು ಎರಡು ವರ್ಷಗಳ ಹಿಂದೆ ಶಂಕುಸ್ಥಾಪನೆ ಮಾಡಲಾಗಿತ್ತು. ಕಾಮಗಾರಿಯು ನಿಗದಿತ ಸಮಯದಲ್ಲೇ ಪೂರ್ಣಗೊಂಡು ಲೋಕಾರ್ಪಣೆಗೊಂಡಿದೆ. ಭಾರತದಲ್ಲಿ ಮೊದಲ ಬಾರಿಗೆ ಮೂರು ಹೊಸ ಪರೀಕ್ಷಾ ಕೇಂದ್ರಗಳನ್ನು ಬೆಂಗಳೂರಿನ ಎನ್‌ಟಿಹೆಚ್‌ನಲ್ಲಿ ಆರಂಭಿಸಲಾಗಿದೆ. ಎನ್‌ಟಿಹೆಚ್ ನೂತನ ಪ್ರಯೋಗಾಲಯ, ಮೊಬೈಲ್ ಅಪ್ಲಿಕೇಶನ್ ಹಾಗೂ ಇವಿ ಬ್ಯಾಟರಿ ಪರೀಕ್ಷಾ ಕೇಂದ್ರವನ್ನು ಲೋಕಾರ್ಪಣೆಗೊಳಿಸಲಾಗಿದೆ ಎಂದರು. ಗ್ರಾಹಕರ ವ್ಯವಹಾರಗಳ ರಾಜ್ಯ ಖಾತೆ ಸಚಿವ ಬಿ.ಎಲ್. ವರ್ಮಾ ಮಾತನಾಡಿ, 1912ರಲ್ಲಿ ಕೋಲ್ಕತ್ತಾದ ಅಲಿಪುರದಲ್ಲಿ ಗವರ್ನ್ಮೆಂಟ್ ಟೆಸ್ಟ್ ಹೌಸ್' ಆಗಿ ಪ್ರಾರಂಭವಾದ ಈ ಸಂಸ್ಥೆಯು 114 ವರ್ಷಗಳ ಸುದೀರ್ಘ ಸೇವೆ ಪೂರ್ಣಗೊಳಿಸಿ, 115ನೇ ವರ್ಷಕ್ಕೆ ಪದಾರ್ಪಣೆ ಮಾಡಿದೆ.



ವಿಶ್ವದ 13ನೇ ರಾಷ್ಟ್ರವಾಗಿ ಭಾರತ

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಮೇಕ್ ಇನ್ ಇಂಡಿಯಾ ಆತ್ಮನಿರ್ಭರ ಭಾರತ' ಮತ್ತು ವಿಕಸಿತ ಭಾರತ 2047ರ ಕನಸನ್ನು ನನಸು ಮಾಡಲು ಉತ್ಪಾದನೆಯ ಗುಣಮಟ್ಟ ಮತ್ತು ಭದ್ರತೆ ಅತ್ಯಗತ್ಯ ಎಂದು ಸಚಿವರು ಪ್ರತಿಪಾದಿಸಿದರು.




## ನೂತನವಾಗಿ ನಿರ್ಮಾಣವಾಗಿರುವ ಪರೀಕ್ಷಾ ಕೇಂದ್ರದ ಉದ್ಘಾಟನೆ

## ಗುಣಮಟ್ಟ ಪರಿಶೀಲನೆಗೆ ಹೆಚ್ಚಿನ ವೇಗ

ಕೃಷಿ, ರಕ್ಷಣೆ ಮತ್ತು ವಿಪತ್ತು ನಿರ್ವಹಣೆಯಲ್ಲಿ ಡ್ರೋನ್ ಬಳಕೆಯನ್ನು ಪ್ರೋತ್ಸಾಹಿಸಲು ಎನ್‌ಟಿಹೆಚ್ ಪರೀಕ್ಷಾ ಸೌಲಭ್ಯವನ್ನು ವಿಸ್ತರಿಸುತ್ತಿದೆ. ಇವಿ (ಎಲೆಕ್ಟ್ರಿಕ್ ವಾಹನ) ಬ್ಯಾಟರಿಗಳ ಸುರಕ್ಷತೆ ಮತ್ತು ದಕ್ಷತೆಯನ್ನು ಖಚಿತಪಡಿಸಲು ಆಧುನಿಕ ಪರೀಕ್ಷಾ ವ್ಯವಸ್ಥೆಯನ್ನು ಬಲಪಡಿಸಲಾಗುತ್ತಿದೆ. ಪರಿಸರ ಭದ್ರತೆ ಹಾಗೂ ಕೈಗಾರಿಕಾ ಸಾಮಗ್ರಿಗಳ ಗುಣಮಟ್ಟ ಪರಿಶೀಲನೆಗೆ ಹೆಚ್ಚಿನ ವೇಗ ನೀಡಲಾಗುತ್ತಿದೆ ಎಂದರು.

ಇದೀಗ ವಿದೇಶಗಳಲ್ಲಿ ಅಥವಾ ಖಾಸಗಿಯವರಿಂದ ಪರೀಕ್ಷೆ ನಡೆಸಲು 50 ಲಕ್ಷದವರೆಗೆ ಭಾರಿ ವೆಚ್ಚವಾಗುತ್ತಿತ್ತು. ಇದನ್ನು ಎಂಎಸ್‌ಎಂಇ ಹಾಗೂ ಸಣ್ಣ ನವೋದ್ಯಮಗಳು ಭರಿಸುವುದು ಕಷ್ಟಕರವಾಗಿತ್ತು. ಆದರೆ, ಈಗ ಬೆಂಗಳೂರಿನಲ್ಲೇ ಜಾಗತಿಕ ಗುಣಮಟ್ಟದ ಸರ್ಕಾರದ ಪರೀಕ್ಷಾ ಕೇಂದ್ರ ಲಭ್ಯವಿರುವುದರಿಂದ ಕಾಲಾವಕಾಶ ಮತ್ತು ವೆಚ್ಚ ಎರಡೂ ಭಾರಿ ಪ್ರಮಾಣದಲ್ಲಿ ಉಳಿತಾಯವಾಗಲಿದೆ ಎಂದು ತಿಳಿಸಿದರು.

ದೇಶದ ಜಿಡಿಪಿಗೆ ಎಂಎಸ್‌ಎಂಇ ವಲಯವು ಶೇ.31ಕ್ಕೂ ಹೆಚ್ಚು ಕೊಡುಗೆ ನೀಡುತ್ತಿದ್ದು, ಉತ್ಪಾದನಾ ವಲಯದಲ್ಲಿ ಶೇ.45 ಹಾಗೂ ಒಟ್ಟು ರಫ್ತಿನಲ್ಲಿ ಶೇ.49 ರಷ್ಟು ಪಾಲು ಹೊಂದಿದೆ. ಉದ್ಯಮ್ ಪೋರ್ಟಲ್‌ನಲ್ಲಿ ಇದುವರೆಗೆ ಸುಮಾರು 9 ಕೋಟಿಗೂ ಹೆಚ್ಚು ನೋಂದಣಿಗಳಾಗಿವೆ ಎಂದು ಅಂಕಿ -ಅಂಶಗಳನ್ನು ಸಚಿವರು ವಿವರಿಸಿದರು.

## ಆತ್ಮನಿರ್ಭರ ಭಾರತದತ್ತ ಸಾಗುವ NTHನ ಪಯಣ

ವಿಕಸಿತ ಭಾರತ' ಹಾಗೂ ಜಾಗತಿಕವಾಗಿ ಸ್ಪರ್ಧಾತ್ಮಕ, ಗುಣಮಟ್ಟ-ಆಧಾರಿತವಾಗಿ ಆತ್ಮನಿರ್ಭರ ಭಾರತದತ್ತ ಸಾಗುವ NTH ನ ಪಯಣ ಅನನ್ಯ. ಹೊಸ NTH ಕೇಂದ್ರಗಳು ಹಾಗೂ ವಿಶೇಷ ಪರೀಕ್ಷಾ ಸೌಲಭ್ಯಗಳ ಮೂಲಕ ಗ್ರಾಹಕರು, ಸ್ಟಾರ್ಟ್‌ಅಪ್‌ಗಳು ಮತ್ತು ಕೈಗಾರಿಕೆಗಳಿಗೆ ವಿಶ್ವದರ್ಜೆ ಮೂಲಸೌಕರ್ಯವನ್ನು ಹತ್ತಿರಕ್ಕೆ ತರಲಾಗುತ್ತಿದೆ. Zero Defect, Zero Effect ಪರಿಕಲ್ಪನೆಯೊಂದಿಗೆ ವಿಕಸಿತ ಭಾರತ ನಿರ್ಮಾಣದ ಹಾದಿಯಲ್ಲಿ ಭಾರತೀಯ ಉತ್ಪನ್ನಗಳ ಗುಣಮಟ್ಟ ಹಾಗೂ ನಂಬಿಕೆಯನ್ನು ಹೆಚ್ಚಿಸಲು ನಾವು ಬದ್ಧರಾಗಿದ್ದೇವೆ ಎಂದು ಸಚಿವ ಪ್ರಲ್ಹಾದ ಜೋಶಿ ಪುನರುಚ್ಚರಿಸಿದರು.



ಇದೇ ವೇಳೆ ದೇಶಾದ್ಯಂತ ಹಲವು ಸುಧಾರಿತ ಪರೀಕ್ಷಾ ಸೌಲಭ್ಯಗಳನ್ನು ರಾಷ್ಟ್ರಕ್ಕೆ ಸಮರ್ಪಿಸಲಾಯಿತು.

ಭಾರತದ ಗುಣಮಟ್ಟ ಮತ್ತು ಪರೀಕ್ಷಾ ವ್ಯವಸ್ಥೆಯನ್ನು ಬಲಪಡಿಸಲು ಶ್ರಮಿಸಿದ ವಿಜ್ಞಾನಿಗಳು, ಇಂಜಿನಿಯರ್‌ಗಳು ಹಾಗೂ ವೃತ್ತಿಪರರಿಗೆ ವಾರ್ಷಿಕ ಶ್ರೇಷ್ಠತಾ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಕೇಂದ್ರ ರಾಜ್ಯ ಸಚಿವರಾದ ಬಿ.ಎಲ್.ವರ್ಮಾ, ಶೋಭಾ ಕರಂದ್ಲಾಜೆ ಮತ್ತಿತರು ಉಪಸ್ಥಿತರಿದ್ದರು.

## ಮೋಡ ಬಿತ್ತನೆ ಕಾರ್ಯಕ್ರಮ: ಮೇಲ್ವಿಚಾರಣೆ, ತಾಂತ್ರಿಕ ಮಾರ್ಗದರ್ಶನಕ್ಕಾಗಿ ಎರಡು ಸಮಿತಿಗಳ ರಚನೆ

• ಉದಯವಾಹಿನಿ, ಬೆಂಗಳೂರು

ಪ್ರಸಕ್ತ ಸಾಲಿನಲ್ಲಿ ರಾಜ್ಯದ ಬಹುತೇಕ ಭಾಗಗಳಲ್ಲಿ ಮುಂಗಾರು ಮಳೆ ಸಾಮಾನ್ಯಕ್ಕಿಂತ ಕಡಿಮೆಯಾಗಿರುವ ಹಿನ್ನೆಲೆಯಲ್ಲಿ, ಮಳೆ ಕೊರತೆ ಹಾಗೂ ಬರದ ಪರಿಸ್ಥಿತಿಯನ್ನು ಎದುರಿಸಲು ರಾಜ್ಯ ಸರ್ಕಾರವು ಹಮ್ಮಿಕೊಂಡಿರುವ ಮೋಡ ಬಿತ್ತನೆ ಕಾರ್ಯಕ್ರಮದ ಸುಗಮ ಅನುಷ್ಠಾನ, ಉಸ್ತುವಾರಿ ಹಾಗೂ ತಾಂತ್ರಿಕ ಮಾರ್ಗದರ್ಶನಕ್ಕಾಗಿ ಎರಡು ಪ್ರತ್ಯೇಕ ಸಮಿತಿಗಳನ್ನು ರಚಿಸಿ ಆದೇಶ ಹೊರಡಿಸಲಾಗಿದೆ. ಮೋಡ ಬಿತ್ತನೆ ಕಾರ್ಯವನ್ನು ವೈಜ್ಞಾನಿಕವಾಗಿ ನಿರ್ವಹಿಸಲು ಮತ್ತು ಮಳೆ ಕೊರತೆ ಇರುವ ಪ್ರದೇಶಗಳಲ್ಲಿ ಪರಿಣಾಮಕಾರಿಯಾಗಿ ಜಾರಿಗೊಳಿಸಲು ಈ ಸಮಿತಿಗಳು ಕಾರ್ಯನಿರ್ವಹಿಸಲಿವೆ ಎಂದು ರಾಜ್ಯ ಸರ್ಕಾರ ಹೊರಡಿಸಿರುವ ಆದೇಶದಲ್ಲಿ ತಿಳಿಸಲಾಗಿದೆ.

ಈ ಸಮಿತಿಯು ಮೋಡ ಬಿತ್ತನೆ ಕಾರ್ಯಕ್ರಮದ ಸಮಗ್ರ ಉಸ್ತುವಾರಿ, ಮೇಲ್ವಿಚಾರಣೆ ಹಾಗೂ ಪರಿಶೀಲನೆಯನ್ನು ನಡೆಸಲಿದೆ. ಈ ಕಮಿಟಿಯಲ್ಲಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು ಅಧ್ಯಕ್ಷರಾಗಿದ್ದು, ಒಟ್ಟು 6 ಮಂದಿ ಸದಸ್ಯರು, ಒಬ್ಬರು ಸದಸ್ಯ ಕಾರ್ಯದರ್ಶಿ



ಇದ್ದಾರೆ. ಸದಸ್ಯರುಗಳಾಗಿ ಜಲಸಂಪನ್ಮೂಲ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳು, ಕಂದಾಯ ಇಲಾಖೆಯ (ವಿಪತ್ತು ನಿರ್ವಹಣೆ) ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಕಾರ್ಯದರ್ಶಿಗಳು, ಕೃಷಿ ಇಲಾಖೆಯ ಕಾರ್ಯದರ್ಶಿಗಳು, ಜಲಸಂಪನ್ಮೂಲ ಇಲಾಖೆಯ ಕಾರ್ಯದರ್ಶಿಗಳು, ಕೆಎಸ್‌ಎನ್‌ಡಿಎಂಸಿ ವ್ಯವಸ್ಥಾಪಕ ನಿರ್ದೇಶಕರುಗಳಿರಲಿದ್ದಾರೆ.

ಕರ್ನಾಟಕ ನೀರಾವರಿ ನಿಗಮದ ವ್ಯವಸ್ಥಾಪಕ ನಿರ್ದೇಶಕರು ಸದಸ್ಯ ಕಾರ್ಯದರ್ಶಿಗಳಾಗಿದ್ದಾರೆ. ಈ ಸಮಿತಿಯು ಕಾರ್ಯಕ್ರಮದ ತಾಂತ್ರಿಕ ವಿಷಯಗಳಲ್ಲಿ ಸಹಕಾರ, ಮಾರ್ಗದರ್ಶನ ಮತ್ತು ಸಲಹೆಗಳನ್ನು ನೀಡಲಿದೆ.ನಿರ್ದೇಶಕರು ಅಧ್ಯಕ್ಷರಾಗಿರುವ ಈ ಸಮಿತಿಯಲ್ಲಿ ಒಟ್ಟು 8 ಮಂದಿ ಸದಸ್ಯರೊಂದಿಗೆ ಒಬ್ಬರು ಸದಸ್ಯ ಕಾರ್ಯದರ್ಶಿ ಹಾಗೂ ಒಬ್ಬರು ವಿಶೇಷ ಆಹ್ವಾನಿತರಿದ್ದಾರೆ.

ಸದಸ್ಯರುಗಳಾಗಿ ಕೃಷಿ ಇಲಾಖೆ, ಹವಾಮಾನ ಕೇಂದ್ರ,ಕರ್ನಾಟಕ ರಾಜ್ಯ ದೂರಸಂವೇದಿ ಅನ್ವಯಿಕ ಕೇಂದ್ರದ ನಿರ್ದೇಶಕರುಗಳಿದ್ದಾರೆ. ಐಐಎಸ್‌ಸಿ(ಇಂಡಿಯನ್ ಇನ್ಸಿಟಿಟ್ಯೂಟ್ ಆಫ್ ಸೈನ್ಸ್) ಪ್ರಾಧ್ಯಾಪಕರಾದ ಪ್ರೊ. ನಾಗೇಶ್ ಕುಮಾರ್, ನಿವೃತ್ತ ಪ್ರಾಧ್ಯಾಪಕರಾದ ಪ್ರೊ. ಜಿ.ಎಸ್. ಭಟ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ನಿವೃತ್ತ ಇಂಜಿನಿಯರ್ ಇನ್ ಚೀಫ್ ಅಗಿದ್ದ ಹೆಚ್.ಎಸ್. ಪ್ರಕಾಶ್ ಕುಮಾರ್, ಪುಣೆಯ ಐಐಟಿಎಂ ಜಂಟಿ ನಿರ್ದೇಶಕರ ದರ್ಜೆಗಿಂತ ಕಡಿಮೆಯಿಲ್ಲದ ಪ್ರತಿನಿಧಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಮುಖ್ಯ ಪರಿಸರ ಅಧಿಕಾರಿಗಳು ಸದಸ್ಯರಾಗಿದ್ದಾರೆ.

ಮಲಪ್ರಭಾ ಯೋಜನಾ ವಲಯದ ಮುಖ್ಯ ಇಂಜಿನಿಯರ್ ಸದಸ್ಯ ಕಾರ್ಯದರ್ಶಿ ಹಾಗೂ ಬೆಳಗಾವಿಯ ಜೈನ್ ಕಾಲೇಜ್ ಆಫ್ ಇಂಜಿನಿಯರಿಂಗ್‌ನ ಸಿವಿಲ್ ಇಂಜಿನಿಯರಿಂಗ್ ವಿಭಾಗದ ಮುಖ್ಯಸ್ಥರಾದ ಡಾ.ಸಂಜೀವ್ ಸಂಗಮಿ ಅವರು ವಿಶೇಷ ಆಹ್ವಾನಿತರಾಗಿದ್ದಾರೆ.

### ಯೋಜನೆ ವಿವರ

ಮೋಡ ಬಿತ್ತನೆ ಕಾರ್ಯಕ್ಕಾಗಿ ರಾಜ್ಯ ಸರ್ಕಾರ ಒಟ್ಟು 28.52 ಕೋಟಿ ರೂ. ಅಂದಾಜು ಮೊತ್ತದ ಆಡಳಿತಾತ್ಮಕ ಅನುಮೋದನೆ ನೀಡಿದೆ. ಇದನ್ನು ಜಲಸಂಪನ್ಮೂಲ ಇಲಾಖೆಯ 'ಕರ್ನಾಟಕ ನೀರಾವರಿ ನಿಗಮ ನಿಯಮಿತ ಮತ್ತು ಕಂದಾಯ ಇಲಾಖೆಯ 'ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ ಜಂಟಿಯಾಗಿ ಅನುಷ್ಠಾನಗೊಳಿಸಲಿವೆ. ಸಂಸ್ಥೆಯ ಮೂಲಕ ಈ ಸೇವೆಯನ್ನು ಪಡೆಯಲು ತೀರ್ಮಾನಿಸಲಾಗಿದ್ದು, ಪಾರದರ್ಶಕತೆ ಕಾಯ್ದೆಯಿಂದ ವಿನಾಯಿತಿ ನೀಡಲಾಗಿದೆ.

## ಆರ್‌ಎಸ್‌ಎಸ್ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡಿದ ಆರೋಪ: ಸಿದ್ದರಾಮಯ್ಯ ವಿರುದ್ಧದ ಮರುಪರಿಶೀಲನಾ ಅರ್ಜಿ ವಜಾ

• ಉದಯವಾಹಿನಿ, ಬೆಂಗಳೂರು

ಅತಿಹೆಚ್ಚು ಅಪರಾಧ ಕೃತ್ಯಗಳಾಗುತ್ತಿರುವುದೇ ಆರ್‌ಎಸ್‌ಎಸ್ ಮತ್ತು ಬಜರಂಗದಳದಿಂದ ಎಂದು ಸದನದಲ್ಲೇ ಬಹಿರಂಗವಾಗಿ ಟೀಕಿಸಿದ್ದ ಸಿಎಂ ಸಿದ್ದರಾಮಯ್ಯ ವಿರುದ್ಧದ ಮರುಪರಿಶೀಲನಾ ಅರ್ಜಿ ವಜಾಗೊಂಡಿದೆ.

ಆರ್‌ಎಸ್‌ಎಸ್ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡಿದ್ದಾರೆಂದು ಆರೋಪಿಸಿ ಸಿದ್ದರಾಮಯ್ಯ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ಸಲ್ಲಿಸಲಾಗಿದ್ದ ಖಾಸಗಿ ದೂರನ್ನು ಬೆಂಗಳೂರಿನ 42ನೇ ಎಸಿಜೆಎಂ ಕೋರ್ಟ್ ವಜಾ ಮಾಡಿತ್ತು. ಇದೀಗ ಜನಪ್ರತಿನಿಧಿಗಳ ವಿಶೇಷ ಕೋರ್ಟ್ ಸಹ ಎಸಿಜೆಎಂ ಕೋರ್ಟ್ ಆದೇಶವನ್ನು ಎತ್ತಿ ಹಿಡಿದಿದ್ದು,ಮಾಜಿ ಸಿಎಂ ಸಿದ್ದರಾಮಯ್ಯ ವಿರುದ್ಧದ ಮರುಪರಿಶೀಲನಾ ಅರ್ಜಿಯನ್ನು ವಜಾಗೊಳಿಸಿ ಆದೇಶ ಹೊರಡಿಸಿದೆ. ಅತಿಹೆಚ್ಚು ಅಪರಾಧ ಕೃತ್ಯಗಳಾಗುತ್ತಿರುವುದೇ ಆರ್ ಎಸ್ ಎಸ್ ಮತ್ತು ಬಜರಂಗದಳದಿಂದ ಎಂದು ಹೇಳಿ ಜನರ ಭಾವನೆಗಳಿಗೆ ಧಕ್ಕೆ ಆರೋಪದಡಿ ಕಿರಣ್ ಎನ್ನುವರು ಸಿದ್ದರಾಮಯ್ಯ ವಿರುದ್ಧ ಕೋರ್ಟ್‌ನಲ್ಲಿ ಖಾಸಗಿ ದೂರು ಸಲ್ಲಿಸಿದ್ದರು.

ಆದ್ರೆ, ಕೋರ್ಟ್, ಈ ಕೇಸ್ ದಾಖಲಿಸಿಕೊಳ್ಳುವ ಮುನ್ನ ಸಿಎಂ ಸಿದ್ದರಾಮಯ್ಯನವರ ವಾದ ಆಲಿಸಲು ಕೋರ್ಟ್ ಅವಕಾಶ ನೀಡಿ ಬಿಎನ್ ಎಸ್‌ಎಸ್ ಸೆಕ್ಷನ್ 223 ಅಡಿಯಲ್ಲಿ ನೋಟಿಸ್ ನೀಡಿತ್ತು.

ಬಳಿಕ ಸಿದ್ದರಾಮಯ್ಯನವರ ಪರ ವಕೀಲರ ವಾದ ಆಲಿಸಿದ್ದ ಬೆಂಗಳೂರಿನ 42ನೇ ಎಸಿಜೆಎಂ ಕೋರ್ಟ್, ಖಾಸಗಿ ದೂರನ್ನು ಮಾಡಿತ್ತು.

## ಒಂದೇ ಬಾರಿಗೆ ಬರೋಬ್ಬರಿ 15 ಐಪಿಎಸ್ ಅಧಿಕಾರಿಗಳ ವರ್ಗಾವಣೆ

• ಉದಯವಾಹಿನಿ, ಬೆಂಗಳೂರು

ಆಡಳಿತ ಯಂತ್ರಕ್ಕೆ ಚುರುಕು ಮುಟ್ಟಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರವು ಒಂದೇ ಸಲಕ್ಕೆ ಬರೋಬ್ಬರಿ 15 ಐಪಿಎಸ್ ಅಧಿಕಾರಿಗಳನ್ನು ದಿಢೀರ್ ವರ್ಗಾವಣೆ ಮಾಡಿ ಮಹತ್ವದ ಆದೇಶ ಹೊರಡಿಸಿದೆ. ಹುಬ್ಬಳ್ಳಿ ಧಾರವಾಡ ಪೊಲೀಸ್ ಆಯುಕ್ತರಾಗಿದ್ದ ಎನ್ ಶಶಿಕುಮಾರ್ ಅವರನ್ನೂ ಸಹ ವರ್ಗಾವಣೆ ಮಾಡಲಾಗಿದ್ದು, ಇವರ ಜಾಗಕ್ಕೆ ಭೂಷಣ್ ಬೊರಸೆ ಅವರನ್ನು ನೇಮಕ ಮಾಡಲಾಗಿದೆ. ಶಶಿಕುಮಾರ್ ಅವರಿಗೆ ಸರ್ಕಾರ ಇನ್ನೂ ಯಾವುದೇ ಸ್ಥಳ ತೋರಿಸದೇ ವರ್ಗಾಯಿಸಿದೆ. ಪಿ.ಹರಿಶೇಖರನ್, (ಎಡಿಜಿಪಿ) ಡಿಸಿಆರ್‌ಇಗೆ ವರ್ಗಾವಣೆ, ನಂಜುಂಡಸ್ವಾಮಿ (ಎಡಿಜಿಪಿ) ಮಾನವಹಕ್ಕುಗಳ ಆಯೋಗ ದಿವ್ಯಜ್ಯೋತಿ ರೇ-(ಎಡಿಜಿಪಿ) ಅಪರಾಧ ಮತ್ತು ತಾಂತ್ರಿಕ ವಿಭಾಗ ಅಮಿತ್ ಸಿಂಗ್, (ಐಜಿಪಿ)- ಕೆಎಸ್‌ಆರ್‌ಪಿ, ಆರ್.ಚೇತನ್, (ಐಜಿಪಿ) ಪಶ್ಚಿಮ ವಲಯ, ಮಂಗಳೂರು ನಿಕ್ಕಮ್ ಪ್ರಕಾಶ್, (ಐಜಿಪಿ) ಪೊಲೀಸ್ ಆಯುಕ್ತ, ಬೆಳಗಾವಿ ,ಭೂಷಣ್ ಬೊರಸೆ, (ಡಿಐಜಿಪಿ) ಆಯುಕ್ತ, ಹುಬ್ಬಳ್ಳಿ-ಧಾರವಾಡ ಡಿಐಜಿಪಿ ಎನ್.ಶಶಿಕುಮಾರ್‌ಗೆ ಸ್ಥಳ ತೋರಿಸದೆ ವರ್ಗಾವಣೆ, ಶಿವಪ್ರಕಾಶ ದೇವರಾಜ್, ಎಸ್‌ಪಿ, ಮಾದಕದ್ರವ್ಯ ನಿಗ್ರಹ ಪಡೆ ಪದ್ಮಿನಿ ಸಾಹು, ಪೊಲೀಸ್ ವರಿಷ್ಠಾಧಿಕಾರಿ)- ಚಿಕ್ಕಬಳ್ಳಾಪುರ, ಆರ್. ಶ್ರೀನಿವಾಸಗೌಡ, (ಡಿಸಿಪಿ) ಸಿಸಿಬಿ-1 ಬೆಂಗಳೂರು ಡಾ.ಶಿವಕುಮಾರ್, (ಎಸ್‌ಪಿ) ಕರ್ನಾಟಕ ಲೋಕಾಯುಕ್ತ ಕುಶಲ್ ಚೌಕ್ಸೆ, (ಡಿಸಿಪಿ)ಆಡಳಿತ ವಿಭಾಗ, ಬೆಂಗಳೂರು ಸಾಹಿಲ್ ಬಾಗ್ಲಾ, ಪೊಲೀಸ್ ವರಿಷ್ಠಾಧಿಕಾರಿ, ಕೊಪ್ಪಳ, ರೋಹನ್ ಜಗದೀಶ್ (ಎಸ್‌ಪಿ)ಬೆಂಗಳೂರು ದಕ್ಷಿಣ ಜಿಲ್ಲೆ ಹೆಚ್.ಎನ್.ಮಿಥುನ್, ಪೊಲೀಸ್ ವರಿಷ್ಠಾಧಿಕಾರಿ- ಗದಗ

# ಬಿ ನಾಗೇಂದ್ರ ನಿರ್ಗಮನ, ಡಿ.ಕೆ ಶಿವಕುಮಾರ್ ಸಂಪುಟದ ಖಾಲಿ 2 ಸಚಿವ ಸ್ಥಾನಗಳಿಗೆ ಪೈಪೋಟಿ ತೀವ್ರ

## 34 ಸಚಿವರ ಮಂಜೂರಾದ ಸಂಖ್ಯಾಬಲ ಹೊಂದಿರುವ ರಾಜ್ಯ ಸಚಿವ ಸಂಪುಟದಲ್ಲಿ ಮತ್ತೊಂದು ಸ್ಥಾನ ಖಾಲಿ

• ಉದಯವಾಹಿನಿ, ಬೆಂಗಳೂರು

ಸಚಿವ ಸ್ಥಾನಕ್ಕೆ ನಾಗೇಂದ್ರ ಅವರು ರಾಜೀನಾಮೆ ನೀಡಿದ ಬೆನ್ನಲ್ಲೆ ಕಾಂಗ್ರೆಸ್‌ನಲ್ಲಿ ಚಟುವಟಿಕೆಗಳು ಗರಿಗೆದರಿದ್ದು, ಖಾಲಿ ಇರುವ ಸಚಿವ ಸ್ಥಾನಕ್ಕೆ ಪೈಪೋಟಿ ಬಿರುಸುಗೊಂಡಿದೆ. ವಾಲ್ಮೀಕಿ ನಿಗಮದಲ್ಲಿ ಹಗರಣ ಆರೋಪಕ್ಕೆ ಗುರಿಯಾಗಿದ್ದ ಬಿ. ನಾಗೇಂದ್ರ ಅವರು ಪ್ರತಿಪಕ್ಷಗಳ ನಿರಂತರ ಪ್ರತಿಭಟನೆಯ ಬಳಿಕ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಡಿಕೆಶಿವಕುಮಾರ್ ನೇತೃತ್ವದ ಸಚಿವ ಸಂಪುಟ ಪುನಾರಚನೆಗೆ ವೇದಿಕೆ ಸಿದ್ಧವಾಗಿದೆ.

ಆಗಸ್ಟ್ 3ರಂದು ನಡೆದ ಸಚಿವ ಸಂಪುಟ ವಿಸ್ತರಣೆಯಲ್ಲಿ ಕೊನೆಯ ಕ್ಷಣದಲ್ಲಿ ವಿಧಾನ ಪರಿಷತ್ ಸದಸ್ಯೆ ಗಾಯತ್ರಿ ಶಾಂತೇಗೌಡ ಅವರ ಹೆಸರನ್ನು ಕೈಬಿಟ್ಟಿದ್ದರಿಂದ ಒಂದು ಸಚಿವ ಸ್ಥಾನ ಖಾಲಿ ಉಳಿದಿತ್ತು. ಡಿ ಕೆ ಶಿವಕುಮಾರ್ ಸಂಪುಟಕ್ಕೆ ಮಹಿಳೆಯರನ್ನು ಸೇರ್ಪಡೆ ಮಾಡಿಲ್ಲ ಎಂಬ ಟೀಕೆಗಳು ಕೇಳಿಬರುತ್ತಲೇ ಇವೆ. ಇದೀಗ ಬಳ್ಳಾರಿ ಗ್ರಾಮಾಂತರ ಶಾಸಕ ನಾಗೇಂದ್ರ ಅವರು ಸಂಪುಟಕ್ಕೆ ರಾಜೀನಾಮೆ ನೀಡಿರುವುದರಿಂದ, ಒಟ್ಟು 34 ಸಚಿವರ ಮಂಜೂರಾದ ಸಂಖ್ಯಾಬಲ ಹೊಂದಿರುವ ರಾಜ್ಯ ಸಚಿವ ಸಂಪುಟದಲ್ಲಿ ಮತ್ತೊಂದು ಸ್ಥಾನ ಖಾಲಿಯಾಗಿದೆ.

ಒಂದು ಖಾಲಿ ಸ್ಥಾನವನ್ನು ಮಹಿಳೆಯರಿಗೆ ಮೀಸಲಿಡಲಾಗಿದೆ ಎನ್ನಲಾಗುತ್ತಿದ್ದು, ನಾಗೇಂದ್ರ ಅವರ ಸ್ಥಾನಕ್ಕೆ ಸಂಡೂರು ಶಾಸಕಿ, ಬಳ್ಳಾರಿ ಸಂಸದ ತುಕಾರಾಂ ಅವರ ಪತ್ನಿಯೂ ಆಗಿರುವ ಇ. ಅನ್ನಪೂರ್ಣ ತುಕಾರಾಂ ಅವರನ್ನು ಸೇರ್ಪಡೆಗೊಳಿಸುವ ಸಾಧ್ಯತೆ ಇದೆ. ನಾಗೇಂದ್ರ ಮತ್ತು ಅನ್ನಪೂರ್ಣ ಇಬ್ಬರೂ ಒಂದೇ ಜಿಲ್ಲೆಯವರು ಹಾಗೂ ಪರಿಶಿಷ್ಟ ಪಂಗಡ ಸಮುದಾಯಕ್ಕೆ ಸೇರಿದವರಾಗಿರುವುದು ಇದಕ್ಕೆ ಪ್ರಮುಖ





ಕಾರಣ ಎನ್ನಲಾಗಿದೆ.ಕೆಜಿಎಫ್ ಶಾಸಕಿ ರೂಪಕಲಾ ಎಂ. ಶಶಿಧರ್ ಅವರ ತಂದೆ ಕೆ.ಎಚ್. ಮುನಿಯಪ್ಪ ಅವರನ್ನು ಇತ್ತೀಚೆಗೆ ಸಂಪುಟಕ್ಕೆ ಸೇರ್ಪಡೆಗೊಳಿಸಿ, ಸಮಾಜ ಕಲ್ಯಾಣ ಖಾತೆಯನ್ನೂ ನೀಡಿರುವ ಹಿನ್ನೆಲೆಯಲ್ಲಿ ರೂಪಕಲಾ ಅವರ ಹೆಸರು ಸಚಿವ ಸ್ಥಾನದ ಸ್ಪರ್ಧೆಯಿಂದ ಹೊರಗುಳಿಯುವ ಸಾಧ್ಯತೆ ಇದೆ.ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮಾಜಿ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರು ಮತ್ತೊಮ್ಮೆ ಸಚಿವರಾಗುವ ನಿರೀಕ್ಷೆಯನ್ನು ಕೈಬಿಟ್ಟಿಲ್ಲ. ಮೂಡಿಗೆರೆ ಕ್ಷೇತ್ರದ ಮೊದಲ ಬಾರಿಗೆ ಶಾಸಕರಾಗಿರುವ ನಯನಾ ಮೋಟಮ್ಮ, ಶಿವಮೊಗ್ಗ ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಎರಡು ಬಾರಿ ವಿಧಾನ ಪರಿಷತ್ ಸದಸ್ಯೆಯಾಗಿರುವ ಬಲ್ಕೀಸ್ ಬಾನು ಹಾಗೂ ಪಕ್ಷದ ಸಾಗರೋತ್ತರ ಸಂಪರ್ಕ ವಿಭಾಗವನ್ನು ನಿರ್ವಹಿಸಿರುವ ಆರತಿ ಕೃಷ್ಣ ಅವರೂ ಏಕೈಕ ಮಹಿಳಾ ಸಚಿವ ಸ್ಥಾನದ ಮೇಲೆ ತೀವ್ರವಾಗಿ ಲಾಬಿ ನಡೆಸುತ್ತಿದ್ದಾರೆ ಎನ್ನಲಾಗಿದೆ.

ನಾಗೇಂದ್ರ ಅವರ ರಾಜೀನಾಮೆಗೆ ಒತ್ತಾಯಿಸಿ ಪ್ರತಿಪಕ್ಷಗಳು ನಡೆಸಿದ ಪ್ರತಿಭಟನೆ ಹಾಗೂ ಆಡಳಿತ-ಪ್ರತಿಪಕ್ಷಗಳ ನಡುವಿನ ಬಿಕ್ಕಟ್ಟಿನಿಂದ ವಿಧಾನಮಂಡಲದ ಸಂಪೂರ್ಣ ಮುಂಗಾರು ಅಧಿವೇಶನ ಗದ್ದಲದಲ್ಲಿಯೇ ಅಂತ್ಯಗೊಂಡಿತ್ತು.ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಯಾವುದೇ ರಾಜಕೀಯ ಸವಾಲುಗಳಿಲ್ಲದೆ ಸರ್ಕಾರದ ಕೆಲಸಗಳತ್ತ ಗಮನ ಹರಿಸಲು ಪೂರ್ಣ ಪ್ರಮಾಣದ ಸಚಿವ ಸಂಪುಟ ಹೊಂದುವ ನಿರೀಕ್ಷೆಯಲ್ಲಿದ್ದಾರೆ.

**ಡಿಕೆಶಿ ಮತ್ತೆ ದೆಹಲಿಗೆ:** ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಸಚಿವ ಬಿ. ನಾಗೇಂದ್ರರವರ ರಾಜೀನಾಮೆ, ಸಂಪುಟ ವಿಸ್ತರಣೆ ಎಲ್ಲದರ ಬಗ್ಗೆ ಎರಡು ದಿನಗಳ ಹಿಂದೆ ದೆಹಲಿಗೆ ತೆರಳಿ ಕಾಂಗ್ರೆಸ್ ವರಿಷ್ಠ ರಾಹುಲ್‌ಗಾಂಧಿಯವರ ಜತೆ ಚರ್ಚೆ ನಡೆಸಿದ್ದರು.ಈ ಚರ್ಚೆಯ ಸಂದರ್ಭದಲ್ಲಿ ರಾಹುಲ್‌ಗಾಂಧಿಯವರು ಮತ್ತೆ ಸೋಮವಾರ ದೆಹಲಿಗೆ ಬನ್ನಿ, 3ನೇ ಹಂತದ ಸಂಪುಟ ವಿಸ್ತರಣೆಯನ್ನು ಅಂತಿಮಗೊಳಿಸೋಣ ಎಂದು ಸೂಚಿಸಿದ್ದರು. ಅದರಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೋಮವಾರ ಮತ್ತೆ ದೆಹಲಿಗೆ ತೆರಳುತ್ತಿದ್ದಾರೆ.



ಸೋಮವಾರ ದೆಹಲಿಯಲ್ಲಿ ವರಿಷ್ಠರು 3ನೇ ಹಂತದ ಸಂಪುಟ ವಿಸ್ತರಣೆ, ಯಾರನ್ನು ಸಂಪುಟಕ್ಕೆ ಸೇರಿಸಿಕೊಳ್ಳಬೇಕು, ಯಾರನ್ನು ಕೈಬಿಡಬೇಕು ಎಲ್ಲವನ್ನು ಇತ್ಯರ್ಥ ಮಾಡಲಿದ್ದಾರೆ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ರವರ ಜತೆ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ರವರಿಗೂ ಸೋಮವಾರ ದೆಹಲಿಗೆ ಬರುವಂತೆ ಹೈಕಮಾಂಡ್ ಸೂಚಿಸಿದ್ದು, ಬಹುತೇಕ ಸೋಮವಾರ 3ನೇ ಹಂತದ ಸಂಪುಟ ವಿಸ್ತರಣೆಗೆ ಮುಹೂರ್ತ ನಿಗದಿಯಾಗಲಿದ್ದು, ಮುಂದಿನ ವಾರ ಸಂಪುಟ ವಿಸ್ತರಣೆಯಾಗುವ ಸಾಧ್ಯತೆಗಳು ಹೆಚ್ಚಿವೆ.

### ಆಕಾಂಕ್ಷಿಗಳು ದೆಹಲಿಗೆ ದೌಡು

ಮೂರನೇ ಹಂತದ ಸಚಿವ ಸಂಪುಟ ವಿಸ್ತರಣೆ ಸಂಬಂಧ ದೆಹಲಿಯಲ್ಲಿ ಸೋಮವಾರ ವರಿಷ್ಠರ ಸಭೆ ನಿಗದಿಯಾಗಿರುವ ನಡುವೆಯೇ ಸಚಿವ ಸ್ಥಾನದ ಮೇಲೆ ಕಣ್ಣಿಟ್ಟಿರುವ ಹಲವು ಶಾಸಕರು ದೆಹಲಿಗೆ ದೌಡಾಯಿಸಿದ್ದಾರೆ.ಸಚಿವ ಸಂಪುಟದಲ್ಲಿ ಖಾಲಿ ಇರುವ 2 ಸ್ಥಾನಗಳಿಗೆ ಪೈಪೋಟಿ ಇರುವಾಗಲೇ ಕೆಲವರನ್ನು 3-4 ಸಚಿವರನ್ನು ಕೈಬಿಟ್ಟು, ಹಿರಿಯರಾದ ನಮಗೆ ಅವಕಾಶ ಕೊಡಿ ಎಂದು ಕಾಂಗ್ರೆಸ್‌ನ 8-10 ಹಿರಿಯ ಶಾಸಕರು ಹೈಕಮಾಂಡ್ ನಾಯಕರಲ್ಲಿ ಮನವಿ ಮಾಡಿದ್ದಾರೆ.ಇಂದು ಮತ್ತು ನಾಳೆ ಮತ್ತಷ್ಟು ಶಾಸಕರು ದೆಹಲಿ ಯಾತ್ರೆ ಕೈಗೊಳ್ಳಲಿದ್ದಾರೆ

**ಈ ದಿನದ ದರ** ಪೆಟ್ರೋಲ್: 110.93₹/L ಡೀಸೆಲ್ : 98.77₹/L ಬಂಗಾರ: ₹ 15,824 /Gram 24ct ₹ 14,505 /Gram 22ct ಬೆಳ್ಳಿ: ₹255.00/



ಬೆಂಗಳೂರಿನ ತ್ಯಾಗರಾಜ ನಗರದ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ, ಶ್ರೀ ರಾಘವೇಂದ್ರ ಸ್ವಾಮಿಗಳ 355ನೇ ಆರಾಧನೆ ಪ್ರಯುಕ್ತ , ಗೋ ಪೂಜೆ, ಧ್ವಜಾರೋಹಣ, ಧಾನ್ಯ ಪೂಜೆ, ಶ್ರೀ ಮನ್ಮಾಧವ ತೀರ್ಥರ ಮಠದ ಪ್ರಸ್ತುತ ಪೀಠಾಧಿಪತಿಗಳಾದ ಶ್ರೀ ಶ್ರೀ ವಿದ್ಯಾವಲ್ಲ ಮಾದವತೀರ್ಥರ ಅಮೃತ ಹಸ್ತದಿಂದ ನೆರವೇರಿತು.

# ಮಂತ್ರಿ ಸ್ಥಾನಕ್ಕೆ ನಾಗೇಂದ್ರ ರಾಜೀನಾಮೆ: ಬಿಜೆಪಿ ವಿರುದ್ಧ ತೀವ್ರ ವಾಗ್ದಾಳಿ

• ಉದಯವಾಹಿನಿ, ಬೆಂಗಳೂರು

ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣದಲ್ಲಿ ಭಾಗಿಯಾಗಿರುವ ಆರೋಪ ಹೊತ್ತಿರುವ ಬಿ. ನಾಗೇಂದ್ರ ಅವರು ತಮ್ಮ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ.

ವಿಧಾನಸೌಧದಲ್ಲಿ ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಅವರು, ಬಿ.ನಾಗೇಂದ್ರ ಅವರು ತಮ್ಮ ಸಚಿವ ಸ್ಥಾನಕ್ಕೆ ರಾಜೀನಾಮೆ ಘೋಷಿಸಿದರು. ಇದೇ ಸಂದರ್ಭದಲ್ಲಿ ಬಿಜೆಪಿಗರ ವಿರುದ್ಧ ಹಿಗ್ಗಾಮುಗ್ಗ ವಾಗ್ದಾಳಿ ನಡೆಸಿದರು. ಸದನ ನಡೆಯಲು ಬಿಡಲಾರದೇ, ರಾಜ್ಯದ ಜ್ವಲಂತ ಸಮಸ್ಯೆ ಬಗ್ಗೆ ಚರ್ಚೆ ಮಾಡಲು ಅವಕಾಶ ಕಲ್ಪಿಸದೇ ಪ್ರತಿಪಕ್ಷ ನಾಯಕರು ಸಂವಿಧಾನ ವಿರೋಧಿಗಳಂತೆ ವರ್ತಿಸಿದ್ದಾರೆ ಎಂದು ಕಿಡಿಕಾರಿದರು. ವಿರೋಧ ಪಕ್ಷದವರು ಈಗಲೂ



ಉದಯವಾಹಿನಿ ಚಿತ್ರ

ಮನುಸ್ಮೃತಿಯನ್ನೇ ಜಾರಿ ಮಾಡಲು ಪ್ರಯತ್ನಿಸುತ್ತಿದ್ದಾರೆ. ಆದರೇ ಇದು ಪುರಾಣ, ವೇದ ಕಾಲವಲ್ಲ. ಇದು ಸಂವಿಧಾನ ಕಾಲ, ಬಾಬ ಸಾಹೇಬ್ ಯುಗ ಅಂತ ಅವರಿಗೆ ಗೊತ್ತಿಲ್ಲ ಎಂದರು.

ಉತ್ತರಾಖಾಂಡದಲ್ಲಿ ಶಂಭುಕ ಹತ್ಯೆ ಆದನೋ ಆದರೇ, ಈಗ ಅದು ಸಾಧ್ಯವಿಲ್ಲ. ಅದನ್ನು ರಕ್ಷಣೆ ಮಾಡಲು ನ್ಯಾಯದೇವತೆ ಇದೆ. ಮನುಸ್ಮೃತಿಗಳೆಲ್ಲ ಸೇರಿ ಸದನವನ್ನು ಹಾಳು ಮಾಡಿದರು. ಶೂದ್ರರು, ದಲಿತರು, ಮಹಿಳೆಯರು, ಆದಿವಾಸಿಗಳು, ಅಲ್ಪಸಂಖ್ಯಾತರು ಸ್ವತಂತ್ರವಾಗಿ ಬದುಕಲೇ ಬಾರದು ಎಂಬುದು ಬಿಜೆಪಿ ನಾಯಕರ ಧೋರಣೆಯಾಗಿದೆ ಎಂದು ತರಾಟೆಗೆ ತೆಗೆದುಕೊಂಡರು.ವಿರೋಧ ಪಕ್ಷಗಳಿಂದ ಕುತಂತ್ರ ರಾಜಕಾರಣ ಮಾಡುತ್ತಿದೆ. ನೋಟಿಸ್ ಕೊಡಲು ಮನವಿ ಮಾಡಿಕೊಳ್ಳಲಾಗಿತ್ತು. ಆದರೇ ಅದನ್ನು ಕೇಳಲಿಲ್ಲ. ರಾಜ್ಯದಲ್ಲಿ ಬರಗಾಲ, ಕೆಪಿಎಸ್ಸಿ ಹಗರಣ, ಕಾವೇರಿ ವಿವಾದ, ಕಸ್ತೂರಿ ರಂಗನ್ ವರದಿ ಬಗ್ಗೆ ಚರ್ಚೆಗೆ ಸದನದಲ್ಲಿ ಅವಕಾಶವೇ ನೀಡಲಿಲ್ಲ. ವಿನಾಕಾರಣ ವಿರೋಧ ಪಕ್ಷಗಳು ಕುತಂತ್ರ ರಾಜಕಾರಣ ಮಾಡಲಾಗುತ್ತಿದೆ ಎಂದು ವಾಗ್ದಾಳಿ ನಡೆಸಿದರು.

# ನಮ್ಮ ದೇಶಕ್ಕೆ ಅಪಾಯ ಇರುವುದು RSS ನಿಂದಲ್ಲ ಕಾಂಗ್ರೆಸ್‌ನಿಂದ: ಹೆಚ್.ಡಿ ಕುಮಾರಸ್ವಾಮಿ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ರಾಷ್ಟ್ರೀಯ ಸ್ವಯಂಸೇವಕ ಸಂಘ (ಪಥಸಂಚಲನದಲ್ಲಿ ಭಾಗವಹಿಸಿದ್ದ ಆರೋಪದ ಮೇಲೆ ಇಬ್ಬರು ಸರ್ಕಾರಿ ಶಿಕ್ಷಕರನ್ನು ಅಮಾನತುಗೊಳಿಸಿರುವ ಕರ್ನಾಟಕ ಶಾಲಾ ಶಿಕ್ಷಣ ಇಲಾಖೆಯ ಕ್ರಮವನ್ನು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಟೀಕಿಸಿದ್ದಾರೆ.

ಆರ್‌ಎಸ್‌ಎಸ್ ಪಥಸಂಚಲನದಲ್ಲಿ ಭಾಗವಹಿಸಿದ್ದರಿಂದ ಅವರು ಮಾಡಿರುವ ದೊಡ್ಡ ತಪ್ಪೇನು ಎಂದು ಕುಮಾರಸ್ವಾಮಿ ಪ್ರಶ್ನಿಸಿದ್ದಾರೆ. ಶಿಕ್ಷಕರು ಪಥಸಂಚಲನದಲ್ಲಿ ಭಾಗವಹಿಸಿದ್ದರಿಂದ ಕರ್ನಾಟಕದಲ್ಲಿ ಯಾವುದೇ ಹಾನಿ, ಹಿಂಸಾಚಾರ ಅಥವಾ ಅಡಚಣೆ ಉಂಟಾಗಿದೆಯೇ ಎಂದೂ ಅವರು ಪ್ರಶ್ನಿಸಿದ್ದಾರೆ. ಆಗಸ್ಟ್ 20ರಂದು ಯಾದಗಿರಿ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಚನ್ನಬಸಪ್ಪ ಮುಧೋಳ ಅವರು ಅಮಾನತು ಆದೇಶ ಹೊರಡಿಸಿದ್ದರು. ಅಮಾನತುಗೊಂಡಿರುವ ಶಿಕ್ಷಕರಲ್ಲಿ ಸುರಪುರ ತಾಲ್ಲೂಕಿನ ಕುಪ್ಪಿ ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕ ಅಣ್ಣಾ ಸಾಹೇಬ್ ದೇಶಮುಖ್ ಹುಣಸಗಿ ಪಟ್ಟಣದ ಸರ್ಕಾರಿ ಬಾಲಕಿಯರ ಪ್ರೌಢಶಾಲೆಯ ಸಹಾಯಕ ಶಿಕ್ಷಕ ಗುರುರಾಜ್ ಜೋಶಿ ಸೇರಿದ್ದಾರೆ. ಇಲಾಖೆಯ ಆದೇಶಗಳ ಪ್ರಕಾರ, ಅಣ್ಣಾ ಸಾಹೇಬ್ ದೇಶಮುಖ್ ಮತ್ತು ಗುರುರಾಜ್ ಜೋಶಿ ಅವರು 2025ರ ಅ.10 ಮತ್ತು 12ರಂದು ನೆರೆಯ ವಿಜಯಪುರ ಜಿಲ್ಲೆಯ ತಾಳಿಕೋಟೆ ಹಾಗೂ ಯಾದಗಿರಿ ಜಿಲ್ಲೆಯ ಹುಣಸಗಿಯಲ್ಲಿ ನಡೆದ ಆರ್‌ಎಸ್‌ಎಸ್ ಪಥಸಂಚಲನ ಕಾರ್ಯಕ್ರಮಗಳಲ್ಲಿ ಭಾಗವಹಿಸಿದ್ದರು. ಕರ್ನಾಟಕ ನಾಗರಿಕ ಸೇವೆಗಳ ನಿಯಮಗಳು, 2021ರ ನಿಯಮ 3(1), 3(2), 3(3), 5 ಮತ್ತು 7 ಅನ್ನು ಶಿಕ್ಷಕರ ಭಾಗವಹಿಸುವಿಕೆ ಉಲ್ಲಂಘಿಸಿದೆ ಎಂದು ಇಲಾಖೆ ಹೇಳಿದೆ. ಶಿಕ್ಷಕರ ನಡೆ ಕರ್ತವ್ಯ ಲೋಪಕ್ಕೆ ಸಮಾನವಾಗಿದ್ದು, ಶಿಸ್ತು ಕ್ರಮಕ್ಕೆ ಅರ್ಹವಾಗಿದೆ ಎಂದು ಅಮಾನತು ಆದೇಶದಲ್ಲಿ ಉಲ್ಲೇಖಿಸಲಾಗಿದೆ.

# ರಾಜ್ಯದ 43.81 ಲಕ್ಷ ಮತದಾರರ ಸ್ಥಿತಿ ಅತಂತ್ರ; ಚುನಾವಣಾ ಆಯೋಗದಿಂದ ನೋಟಿಸ್!

## ಈ ಮತದಾರರ ಪೈಕಿ ಬರೋಬ್ಬರಿ 43.81 ಲಕ್ಷ ಮಂದಿಯನ್ನು ಅನುಮಾನದಿಂದ ನೋಡುತ್ತಿದೆ. ನೋಟಿಸ್ ಕಳಿಸಲು ಆಯೋಗ ಮುಂದಾಗಿದೆ.

• ಉದಯವಾಹಿನಿ, ಬೆಂಗಳೂರು

1 BLOಗಳಿಗೆ ಹಸ್ತಾಂತರಿಸುತ್ತಾರೆ
2 ಫಾರ್ಮ್-6 ಬಳಸಿ ಸೇರ್ಪಡೆಗಾಗಿ
3 ಬಿಬಿಎಂಪಿ ಉತ್ತರ ಜಿಲ್ಲೆಯಲ್ಲಿ

ರಾಜ್ಯದಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆ ಈಗ ಮತದಾರರ ಮನೆ ಬಾಗಿಲಿಗೆ ಆತಂಕ ತಂದಿಟ್ಟಿದೆ. ರಾಜ್ಯದಲ್ಲಿದ್ದ ಒಟ್ಟು 5.54 ಕೋಟಿ ಮತದಾರರ ಪೈಕಿ 1.8 ಕೋಟಿ ಮತದಾರರನ್ನು ಎಎಸ್‌ಡಿಡಿಒ ಅಡಿಯಲ್ಲಿ ಯಾವುದೇ ನೋಟಿಸ್ ಕೊಡದೆ ಡಿಲೀಟ್ ಮಾಡಿರುವ ಚುನಾವಣಾ ಆಯೋಗ ಮತದಾರರ ಸಂಖ್ಯೆಯನ್ನು 4.46 ಕೋಟಿಗೆ ಇಳಿಸಿದೆ.

ನೋಟಿಸ್‌ಗಳನ್ನು ನಾಗರಿಕರಿಗೆ ಅವರ ಮನೆ ಬಾಗಿಲಿಗೆ ನೀಡಲುಗಳಿಗೆ ಹಸ್ತಾಂತರಿಸುತ್ತಾರೆ. ಪರಿಶೀಲನೆಗಾಗಿ ನಾಗರಿಕರು ನಿರ್ದಿಷ್ಟ ದಾಖಲೆಗಳೊಂದಿಗೆ ಸಂಬಂಧಪಟ್ಟ ಚುನಾವಣಾ ನೋಂದಣಿ ಅಧಿಕಾರಿಗಳು ಗಳು) ಮತ್ತು ಸಹಾಯಕ ಚುನಾವಣಾ ನೋಂದಣಿ ಅಧಿಕಾರಿಗಳನ್ನುಗಳು) ಭೇಟಿ ಮಾಡಬೇಕಾಗುತ್ತದೆ. ಇದು ವಿಫಲವಾದರೆ, ಅವರನ್ನು ಮತದಾರರ ಪಟ್ಟಿಯಿಂದ ತೆಗೆದುಹಾಕಬಹುದು ಮತ್ತು ಫಾರ್ಮ್-6 ಬಳಸಿ ಸೇರ್ಪಡೆಗಾಗಿ ಮತ್ತೆ ಅರ್ಜಿ ಸಲ್ಲಿಸಬೇಕಾಗುತ್ತದೆ.

ಬೆಂಗಳೂರು ನಗರದಲ್ಲಿ (9,45,798), ನಂತರ ಬಿಬಿಎಂಪಿ ಉತ್ತರ ಜಿಲ್ಲೆಯಲ್ಲಿ (6,12,963), ಬಿಬಿಎಂಪಿ ದಕ್ಷಿಣದಲ್ಲಿ (4,17,611) ಗರಿಷ್ಠ ನೋಟಿಸ್‌ಗಳನ್ನು ನೀಡಲಾಗುತ್ತಿದ್ದು, ಬಿಬಿಎಂಪಿ ಕೇಂದ್ರ ಜಿಲ್ಲೆಯಲ್ಲಿ 4,29,345 ನೋಟಿಸ್‌ಗಳನ್ನು ನೀಡಲಾಗುತ್ತಿದೆ. ಬೆಂಗಳೂರು ಗ್ರಾಮೀಣದಲ್ಲಿ, 56,359 ನೋಟಿಸ್‌ಗಳನ್ನು ನೀಡಲಾಗುವುದು ಮತ್ತು ಕನಿಷ್ಠ ಸಂಖ್ಯೆ ದಾವಣಗೆರೆಯಲ್ಲಿ (7,085) ಮಂದಿಗೆ ನೋಟಿಸ್ ಪಡೆಯಲಿದ್ದಾರೆ. ನಾಗರಿಕರು ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಲು



ಉದಯವಾಹಿನಿ ಚಿತ್ರ

ಮತ್ತು ತಿದ್ದುಪಡಿಗಳನ್ನು ಮಾಡಲು ಸಹಾಯ ಮಾಡಲು ಆಗಸ್ಟ್ 29-30 ಮತ್ತು ಸೆಪ್ಟೆಂಬರ್ 19-20 ರಂದು ಸಿಇಒ ಕಚೇರಿ ವಿಶೇಷ ಅಭಿಯಾನವನ್ನು ಘೋಷಿಸಿತು. ನಾಗರಿಕರು ಫಾರ್ಮ್ -6 ಅನ್ನು ಬಳಸಿಕೊಂಡು ಹೊಸ ಮತದಾರರಾಗಿ ನೋಂದಾಯಿಸಲು ಅಥವಾ ತಮ್ಮ ಚುನಾವಣಾ ವಿವರಗಳಲ್ಲಿ ತಿದ್ದುಪಡಿಗಳಿಗಾಗಿ ಫಾರ್ಮ್ -8 ಅನ್ನು ಭರ್ತಿ ಮಾಡಲು ಸಹಾಯ ಮಾಡಲು ಬಿಎಲ್‌ಒಗಳು, ಇಆರ್‌ಒಗಳು ಮತ್ತು ಎಇಆರ್‌ಒಗಳು ತಮ್ಮ ಮತಗಟ್ಟೆಗಳಲ್ಲಿ ಹಾಜರಿರುವುದನ್ನು ಖಚಿತಪಡಿಸಿಕೊಳ್ಳಲು ಸಿಇಒ ಜಿಲ್ಲಾ ಚುನಾವಣಾ ಅಧಿಕಾರಿಗಳಿಗೆ ನಿರ್ದೇಶನಗಳನ್ನು ನೀಡಿದರು. ಎಸ್‌ಐಆರ್ ಭಾಗವಾಗಿ ಮತದಾರರ ನೋಂದಣಿ, ಹಕ್ಕು ಮತ್ತು ಆಕ್ಷೇಪಣೆಗಳನ್ನು ಸ್ವೀಕರಿಸಲು ನಾಲ್ಕು ದಿನಗಳ ವಿಶೇಷ ಅಭಿಯಾನ ನಡೆಸುವಂತೆ ಚುನಾವಣಾ ಆಯೋಗ ಸೂಚಿಸಿದೆ. ಚುನಾವಣಾಧಿಕಾರಿ ಕಚೇರಿ ಹೊರಡಿಸಿರುವ ಆದೇಶದ ಪ್ರಕಾರ, ಆ.29 (ಶನಿವಾರ), ಆ.30 (ರವಿವಾರ), ಸೆ.19 (ಶನಿವಾರ) ಹಾಗೂ ಸೆ.20 (ರವಿವಾರ) ವಿಶೇಷ ಅಭಿಯಾನ ನಡೆಯಲಿದೆ. ಈ ಕುರಿತು ಚುನಾವಣಾ ಆಯೋಗ ಈಗಾಗಲೇ ಅನುಮೋದನೆ ನೀಡಿದ್ದು, ಅಗತ್ಯ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳು ಹಾಗೂ ಚುನಾವಣಾ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಗೈರುಹಾಜರಿ, ಸ್ಥಳಾಂತರಗೊಂಡವರು, ಸತ್ತವರು, ನಕಲು ಮತ್ತು ಇತರರ ಅಡಿಯಲ್ಲಿ ಜನರ ಪಟ್ಟಿ ಹೆಚ್ಚಿರುವ ಪ್ರದೇಶಗಳಿಗೆ ವಿಶೇಷ ಗಮನ ನೀಡಲಾಗುವುದು ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.



ಬೆಂಗಳೂರಿನ ವಿಷಯವೂ ಇದೇ ರೀತಿ ಇರುತ್ತದೆ, ಕರ್ನಾಟಕದಲ್ಲಿ ASDDO ವರ್ಗದ ಅಡಿಯಲ್ಲಿ ಒಟ್ಟು 1,07,96,415 ಜನರಲ್ಲಿ 46,88,744 (43.42%) ಜನರು ಬೆಂಗಳೂರಿನ ನಾಲ್ಕು ಜಿಲ್ಲೆಗಳಲ್ಲಿದ್ದಾರೆ.

**ಇದೀಗ, ಈ ಮತದಾರರ ಪೈಕಿ ಬರೋಬ್ಬರಿ 43.81 ಲಕ್ಷ ಮಂದಿಯನ್ನು ಅನುಮಾನದಿಂದ ನೋಡುತ್ತಿದೆ. 43.81 ಲಕ್ಷ ಮತದಾರರಿಗೆ ನೋಟಿಸ್ ಕಳಿಸಲು ಆಯೋಗ ಮುಂದಾಗಿದೆ. ಶುಕ್ರವಾರದಿಂದಲೇ ನೋಟಿಸ್ ಕಳಿಸುವ ಪ್ರಕ್ರಿಯೆ ಆರಂಭಿಸಿರುವುದಾಗಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದೆ.- ಚುನಾವಣಾ ಆಯೋಗ**

### ಅಂತಿಮ ಮತದಾರರ ಪಟ್ಟಿ ಅ. 27ರಂದು ಪ್ರಕಟ

**ಆಗಸ್ಟ್ 24 ರಿಂದ ಸೆಪ್ಟೆಂಬರ್ 23ರವರೆಗೆ ಮತದಾರರ ಪಟ್ಟಿಯಲ್ಲಿನ ವಿವರಗಳನ್ನು ಸರಿಪಡಿಸಿಕೊಳ್ಳಲು ಹಾಗೀ ಆಗಸ್ಟ್ 24 ರಿಂದ ಅಕ್ಟೋಬರ್ 22ರವರೆಗೆ ಹಕ್ಕುಗಳು ಮತ್ತು ಆಕ್ಷೇಪಣೆಗಳ ನೋಟಿಸ್ ಅವಧಿಯನ್ನು ಒಳಗೊಂಡಿರುತ್ತದೆ. ಅಂತಿಮ ಮತದಾರರ ಪಟ್ಟಿಯನ್ನು ಅಕ್ಟೋಬರ್ 27ರಂದು ಪ್ರಕಟಿಸಲಾಗುವುದು.**

### ಕೈಗಾರಿಕಾ ಅಭಿವೃದ್ಧಿಗೆ 5 ನಗರಗಳನ್ನು ಗುರುತಿಸಲು ಅಧಿಕಾರಿಗಳಿಗೆ ಡಿಕೆಶಿ ನಿರ್ದೇಶನ

ಉದಯವಾಹಿನಿ ಚಿತ್ರ



• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನ ಹೊರಗೆ ಕೈಗಾರಿಕಾ ಅಭಿವೃದ್ಧಿಗಾಗಿ ಐದು ನಗರಗಳನ್ನು ಗುರುತಿಸುವಂತೆ ಕರ್ನಾಟಕ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

ಅವರು ತಮ್ಮ ಗೃಹ ಕಚೇರಿಯಲ್ಲಿ ನಡೆದ ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡುತ್ತಿದ್ದರು.

ಹೂಡಿಕೆದಾರರಿಗೆ ವಿಶೇಷ ಪ್ರೋತ್ಸಾಹ ನೀಡುವ ಮೂಲಕ ಮತ್ತು ಹೆಚ್ಚಿನ ಉದ್ಯೋಗಾವಕಾಶಗಳನ್ನು ಸೃಷ್ಟಿಸುವ ಮೂಲಕ ಈ ನಗರಗಳಿಗೆ ಕೈಗಾರಿಕೆಗಳನ್ನು ಆಕರ್ಷಿಸಲು ಸರ್ಕಾರ ಯೋಜಿಸಿದೆ ಎಂದು ಸಿಎಂಒ ಹೇಳಿಕೆಯಲ್ಲಿ ತಿಳಿಸಿದೆ. ವಿಮಾನ ನಿಲ್ದಾಣ ಸಂಪರ್ಕ ಮತ್ತು ಇತರ ಅಗತ್ಯ ಮೂಲಸೌಕರ್ಯಗಳನ್ನು ಹೊಂದಿರುವ ಐದು ಸೂಕ್ತ ನಗರಗಳನ್ನು ಗುರುತಿಸಲು ಶಿವಕುಮಾರ್ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಕೈಗಾರಿಕಾ ಅನುಮೋದನೆಗಳಿಗಾಗಿ ಏಕ-ಗವಾಕ್ಷಿ ವ್ಯವಸ್ಥೆಯನ್ನು ಸುಗಮಗೊಳಿಸಲು, ನಿಗದಿತ ಸಮಯದೊಳಗೆ ಅರ್ಜಿಗಳನ್ನು ಪ್ರಕ್ರಿಯೆಗೊಳಿಸಲು ಅವರು ಎಲ್ಲಾ ಸಂಬಂಧಿತ ಇಲಾಖೆಗಳಿಗೆ ನಿರ್ದೇಶನ ನೀಡಿದರು.

ಈ ವಿಷಯದ ಬಗ್ಗೆ ಆಯಾ ಇಲಾಖಾ ಸಚಿವರೊಂದಿಗೆ ಚರ್ಚಿಸುವುದಾಗಿ ಅವರು ಹೇಳಿದರು. ಈ ವ್ಯವಸ್ಥೆಯಡಿಯಲ್ಲಿ, 22 ಇಲಾಖೆಗಳು ಮತ್ತು 119 ಸೇವೆಗಳನ್ನು ಡಿಜಿಟಲ್ ಮತ್ತು ಸಕಾಲಿಕ ಅನುಮೋದನೆಗಳಿಗೆ ಒತ್ತು ನೀಡಲಾಗಿದೆ. ನೀತಿ ಆಯೋಗದ ಹೂಡಿಕೆದಾರರ ಸ್ನೇಹಿ ಸೂಚ್ಯಂಕದಲ್ಲಿ ಕರ್ನಾಟಕ 9ನೇ ಸ್ಥಾನದಲ್ಲಿದೆ. ಈ ಶ್ರೇಯಾಂಕವನ್ನು ಮತ್ತಷ್ಟು ಸುಧಾರಿಸಲು ಕ್ರಮಗಳನ್ನು ತೆಗೆದುಕೊಳ್ಳಬೇಕೆಂದು ಸಿಎಂ ನಿರ್ದೇಶಿಸಿದರು.

ಹೇಳಿಕೆಯ ಪ್ರಕಾರ, ಆಂಧ್ರಪ್ರದೇಶ, ಉತ್ತರ ಪ್ರದೇಶ, ತಮಿಳುನಾಡು ಮತ್ತು ಮಧ್ಯಪ್ರದೇಶದಂತಹ ರಾಜ್ಯಗಳು ಹೂಡಿಕೆಗಳನ್ನು ಆಕರ್ಷಿಸಲು ತೆಗೆದುಕೊಳ್ಳುತ್ತಿರುವ ಕ್ರಮಗಳ ಬಗ್ಗೆ ಚರ್ಚಿಸಲಾಯಿತು. ರಾಜ್ಯದಿಂದ ಹೂಡಿಕೆದಾರರು ನಿರೀಕ್ಷಿಸುವ ಸುಧಾರಣೆಗಳ ಕುರಿತು ಸಭೆಯಲ್ಲಿ ಚರ್ಚಿಸಲಾಗಿದೆ.

# ಗುರುರಾಯರ ಸನ್ನಿಧಿಯಲ್ಲಿ ಹರಿದಾಸರ ಕೀರ್ತನೆಗಳ ಗಾಯನ

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನ ಜಯನಗರದ ಐದನೇ ಬಡಾವಣೆಯಲ್ಲಿರುವ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶಾನುಸಾರ ಶ್ರೀಮಠದ ಹಿರಿಯ ವ್ಯವಸ್ಥಾಪಕರಾದ ಶ್ರೀ ಆರ್ ಕೆ ವಾದೀಂದ್ರಾಚಾರ್ಯರ ನೇತೃತ್ವದಲ್ಲಿ ಜರುಗುತ್ತಿರುವ ಶ್ರೀ ಗುರುರಾಯರ 355ನೇ ಆರಾಧನಾ ಮಹೋತ್ಸವದಲ್ಲಿ ಏರ್ಪಡಿಸಿದ್ದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಶ್ರೀಮತಿ ರತ್ನಾ ಪ್ರಸಾದ್, ಶ್ರೀಮತಿ ರಂಜಿತಾ ಪ್ರಸಾದ್, ಶ್ರೀಮತಿ ಮಂಗಳಾ ಮತ್ತು ಶ್ರೀಮತಿ ಅಪೂರ್ವ ಇವರಗಳು ಹರಿದಾಸರ ಕೀರ್ತನೆಗಳನ್ನು ಹಾಡಿದರು. ಇವರ ಗಾಯನಕ್ಕೆ ಕೀಬೋರ್ಡ್ ವಾದನದಲ್ಲಿ ಶ್ರೀ ಅಮಿತ್ ಶರ್ಮಾ ಮತ್ತು ತಬಲಾ ವಾದನದಲ್ಲಿ ಶ್ರೀ ಸರ್ವೋತ್ತಮ ಸಹಕರಿಸಿದರು ಎಂದು ಶ್ರೀ ನಂದಕಿಶೋರಾಚಾರ್ ತಿಳಿಸಿದರು.



ಉದಯವಾಹಿನಿ ಚಿತ್ರ

# ಅಖಂಡ ಜ್ಯೋತಿ ಭವನ್ ಆವರಣದಲ್ಲಿ ರಕ್ಷಾ ಬಂಧನ

• ಉದಯವಾಹಿನಿ, ಆನೇಕಲ್

ಹೆಬ್ಬಗೋಡಿ ನಗರ ಸಭೆ ವ್ಯಾಪ್ತಿಯ ಅನಂತನಗರದಲ್ಲಿರುವ ಪ್ರಜಾಪಿತ ಬ್ರಹ್ಮ ಕುಮಾರೀಸ್ ಅಖಂಡ ಜ್ಯೋತಿ ಭವನ್ ಆವರಣದಲ್ಲಿ ರಕ್ಷಾ ಬಂದನ ಮತ್ತು ಕೃಷ್ಣಾ ಜನ್ಮಾಷ್ಟಮಿ ಕಾರ್ಯಕ್ರಮವನ್ನು ಭಕ್ತಿ ಭಾವದಿಂದ ಆಚರಿಸಲಾಯಿತು.

ಈ ವೇಳೆ ಪ್ರಜಾ ಪಿತ ಬ್ರಹ್ಮ ಕುಮಾರಿ ಈಶ್ವರಿಯ ವಿಶ್ವವಿದ್ಯಾಲಯದ ಅನಂತನಗರ ಶಾಖೆಯ ಮುಖ್ಯಸ್ಥರಾದ ಬಿ.ಕೆ.ಅಮೃತ ಅಕ್ಕ ರವರು ಮಾತನಾಡಿ ರಕ್ಷಾ ಬಂದನ ಎಂದರೆ ಎಲ್ಲರಿಗೂ ಪರಮಾತ್ಮನಿಂದ ರಕ್ಷಣೆ ಬೇಕು ಹಾಗೂ ಶ್ರೀ ರಕ್ಷೆ ಎಂದರೆ ಮನುಷ್ಯ ಮನುಷ್ಯರನ್ನು ಯಾರು ರಕ್ಷಣೆ ಮಾಡುವುದಕ್ಕೆ ಆಗಲ್ಲ.ನಮ್ಮೆಲ್ಲರನ್ನು ರಕ್ಷಣೆ ಮಾಡುವನು ಶಿವ ಆಗಿದ್ದಾರೆ ಎಂದರು.ಇನ್ನು ಕೃಷ್ಣಾ ಜನ್ಮಾಷ್ಠಮಿಯನ್ನು ನಾವೆಲ್ಲರೂ ಸಹ ತುಂಬ ಪ್ರೀತಿಯಿಂದ. ಭಕ್ತಿ ಬಾವದಿಂದ ಪೂಜೆ ಮಾಡುತ್ತೇವೆ. ಕೃಷ್ಣನಂತಹ ಮಗ ಹುಟ್ಟಲಿ. ಕೃಷ್ಣನಂತಹ ಪತಿ ಸಿಗಲಿ. ಕೃಷ್ಣ ಅಂದರೆ ಕೃಷ್ಣನಲ್ಲಿರುವ ಗುಣಗಳು ನಮ್ಮಲ್ಲಿ ಬರಬೇಕು. ಕೃಷ್ಣ ಎಂದರೆ ಮರ್ಯಾದ ಪುರುಷೋತ್ತಮ ಮತ್ತು ಗುಣಮೂರ್ತಿಯಾಗಿದ್ದು ಆ ಗುಣಗಳು ನಮ್ಮಲ್ಲಿ ಬರಲಿ ಎಂಬ ಉದ್ದೇಶದಿಂದ ಕೃಷ್ಣಾ ಜನ್ಮಾಷ್ಠಮಿಯನ್ನು ಆಚರಿಸಲಾಗುತ್ತದೆ ಎಂದರು.



ಉದಯವಾಹಿನಿ ಚಿತ್ರ

ಈ ಒಂದು ಸಂಗಮ ಯುಗದಲ್ಲಿ ಪರಮಾತ್ಮ ನಿಂದ ಜ್ಞಾನ ಪಡೆದು ಕೊಂಡವನು ಕೃಷ್ಣ ಆದ. ಪ್ರಜಾ ಪಿತ ಬ್ರಹ್ಮ ಕುಮಾರಿ ಈಶ್ವರಿಯ ವಿಶ್ವ ವಿದ್ಯಾಲಯದ ಮುಖ್ಯ ಉದ್ದೇಶ ಏನೆಂದರೆ ನಾವೆಲ್ಲರೂ ಪರಮಾತ್ಮನ ಜ್ಞಾನ ವನ್ನು ಕೇಳಿ ಮನುಷ್ಯರಿಂದ ದೇವರುಗಳು ಆಗಬೇಕು ಎಂದರು. ಕೃಷ್ಣನ ರಾಜ್ಯದಲ್ಲಿ ನಾವು ಬರಬೇಕು ಎಂಬುವ ಉದ್ದೇಶದಿಂದ ಕೃಷ್ಣಾ ಜನ್ಮಾಷ್ಠಮಿ ಕಾರ್ಯಕ್ರಮವನ್ನು ಅತ್ಯಂತ ಭಕ್ತಿ ಭಾವದಿಂದ ಆಚರಿಸಲಾಗುತ್ತದೆ ಎಂದು ಹೇಳಿದರು.

# ನಮ್ಮ ಸಾಮೀಪ್ಯಕ್ಕೆ ಎಂದೂ ಚ್ಯುತಿ ಬರಲಿಲ್ಲ

• ಉದಯವಾಹಿನಿ, ಬೆಂಗಳೂರು

ಒಬ್ಬರು ದೊಡ್ಮನೆ ಗಣೇಶ ಹೆಗಡೆ- ರಾಮ ಕೃಷ್ಣ ಹೆಗಡೆ ಅವರ ಅಣ್ಣ. ಮತ್ತೊಬ್ಬರು ಶಕುಂತಲಾ ಹೆಗಡೆ- ಹೆಗಡೆಯವರ ಧರ್ಮಪತ್ನಿ. ಈ ಇಬ್ಬರಿಗಿಂತ ರಾಮಕೃಷ್ಣ ಹೆಗಡೆ ಯವರನ್ನು ಹತ್ತಿರದಿಂದ, ಚೆನ್ನಾಗಿ ಬಲ್ಲವರು ಇರಲು ಸಾಧ್ಯವೇ ಇಲ್ಲ. ಇವರಿಬ್ಬರೂ ಈ ಹಿಂದ ವಿಶ್ವವಾಣಿ ಜೊತೆ ರಾಮಕೃಷ್ಣ ಹೆಗಡೆಯವರ ಕುರಿತು ಹಂಚಿಕೊಂಡ ಆಪ್ತ ಬರಹಗಳು ಇಲ್ಲಿವೆ. ಇವು ಹೆಗಡೆಯವರ ವ್ಯಕ್ತಿತ್ವವನ್ನೂ ಕಟ್ಟಿಕೊಡುತ್ತವೆ. ರಾಮಕೃಷ್ಣನ ಜೀವನದ ಪ್ರಮುಖ ಘಟನೆಗಳನ್ನು ಮತ್ತು ಘಟ್ಟಗಳನ್ನು ಒಬ್ಬ ಬಂಧುವಾಗಿ ಹತ್ತಿರದಿಂದ ನೋಡುತ್ತಾ ಬಂದ ನನ್ನ ಎದುರು ಚಿತ್ರಗಳೂ ಸಾಲಾಗಿ ನಿಲ್ಲುತ್ತವೆ. ಒಮ್ಮೆ ವಿಸ್ಮಯ, ಇನ್ನೊಮ್ಮೆ ಹರ್ಷ ರಾಮಕೃಷ್ಣ ಬಗ್ಗೆ ನಾನಿರಿಸಿಕೊಂಡಿದ್ದ ನಿರೀಕ್ಷೆ-ಭರವಸೆಗಳನ್ನು ಮೀರಿ ಅವನು ವಿಶಾಲ ಜನವರ್ಗದ ಪ್ರೀತಿ-ವಿಶ್ವಾಸ ಗಳಿಸಿಕೊಂಡಿದ್ದಾನೆ ಸದ್ಭಾವನೆಗಳನ್ನು ಉಳಿಸಿಕೊಂಡಿದ್ದಾನೆ. ಉತ್ತಮ ನಾಯಕತ್ವದ ಗುಣಗಳೆಲ್ಲವೂ ಆತನಲ್ಲಿದೆ. ರಾಷ್ಟ್ರದ ಯಾವುದೇ ಅತ್ಯುನ್ನತ ಹುದ್ದೆಯನ್ನು ಏರುವ ಎಲ್ಲಾ ಅರ್ಹತೆಗಳ ಜೊತೆಗೆ ಆ ಸ್ಥಾನಮಾನದ ಘನತೆಯನ್ನು ಎತ್ತರಕ್ಕೆ ಏರಿಸುವ ಎಲ್ಲಾ ಗುಣ-ಸಾಮರ್ಥ್ಯಗಳು ಆತನಲ್ಲಿವೆ. ಆದರೆ ಅವನೆಂದೂ



ಉದಯವಾಹಿನಿ ಚಿತ್ರ

ಅಧಿಕಾರ- ಹುದ್ದೆಗಳ ಬೆನ್ನು ಬಿದ್ದವನ್ನಲ್ಲ. ಲಾಬಿ ಮಾಡುವುದು, ಪ್ರಚಾರ ಗಿಟ್ಟಿಸಿಕೊಳ್ಳುವುದು ಅವನ ಮನೋಧರ್ಮಕ್ಕೆ ಒಗ್ಗದು. ಇಂಥ ತಮ್ಮನ ಬಗ್ಗೆ ಯಾವ ಅಣ್ಣನಿಗೆ ಹೆಮ್ಮೆಯಾಗಲಿಕ್ಕಿಲ್ಲ! ರಾಜಕೀಯ ರಂಗದಲ್ಲಿ ಏಳು-ಬೀಳುಗಳಿರುವುದು ಸಹಜ. ನಂಬಿಕೆ-ವಿಶ್ವಾಸಗಳಿಗೆ ಹೆಚ್ಚು ಬೆಲೆ ಕೊಡುವ ರಾಮಕೃಷ್ಣ ಅದಕ್ಕೆ ಆಘಾತವುಂಟಾದಲ್ಲಾಗಲೆಲ್ಲ ನೊಂದುಕೊಂಡಿದ್ದಾನೆ. ಮನಸು ತೀರಾ ಘಾಸಿಗೊಂಡಾಗ ಒಮ್ಮೊಮ್ಮೆ ನನ್ನ ಬಳಿ ಹೇಳಿಕೊಂಡಿದ್ದಿದೆ. ಆಗ ನಾನು ನನ್ನ ಅನುಭವದ ನೆಲೆಯಲ್ಲಿ ಸಾಂತ್ವನ ಹೇಳಿ ಮಾರ್ಗದರ್ಶನ ಮಾಡಿದ್ದೇನೆ.

# ಮೌಲ್ಯಗಳನ್ನು ನಂಬಿ ಕಹಿ ಉಂಡವರು...

• ಉದಯವಾಹಿನಿ, ಬೆಂಗಳೂರು

ನಾನಾಗಲಿ ನನ್ನ ಮೂರು ಮಕ್ಕಳಾಗಲಿ ಹೆಗಡೆಯವರ ರಾಜಕೀಯ ಜೀವನದಲ್ಲಿ ಕೈ ಹಾಕಲಿಲ್ಲ. ದೂರ ಉಳಿದಿದ್ದೇವೆ. ಬೇರೆ ರಾಜಕಾರಣಿಗಳ ಹಾಗೆ ಹೆಂಡತಿ-ಮಕ್ಕಳಿಗೆ ಯಾವುದೇ ಪುಷ್ಟಿ ಕೊಟ್ಟಿಲ್ಲ. ರಾಜಕೀಯವಾಗಿ ಮುಂದೆ ತರಲಿಲ್ಲ. ಈ ವಿಚಾರದಲ್ಲಿ ನಾನು ಹಾಗೂ ನನ್ನ ಮಕ್ಕಳು ಜಾಗೃತೆಯಿಂದ ನಡೆದುಕೊಂಡಿದ್ದೇವೆ ಎಂದು ಹೆಮ್ಮೆಯಿಂದ ಹೇಳುತ್ತೇನೆ. ಸಾಮಾನ್ಯವಾಗಿ ಒಬ್ಬ ವ್ಯಕ್ತಿಗೆ ಅಧಿಕಾರ ಬಂದಾಗ ಅವನ ಕುಟುಂಬದವರು, ಸಂಬಂಧಿಕರು, ಜಾತಿ ಯವರು ಅಧಿಕಾರದ ದುರುಪಯೋಗ ಮಾಡಿಕೊಳ್ಳುತ್ತಾರೆ.

ಆದರೆ ಹೆಗಡೆ ಇದಕ್ಕೆ ಅವಕಾಶ ಕೊಡಲಿಲ್ಲ. ಅವರು ಮೌಲ್ಯಾ ಧಾರಿತ ರಾಜಕಾರಣವನ್ನು ನಿಜ ಜೀವನದಲ್ಲಿ ಮಾಡಲು ಹೋಗಿ ಕಹಿ ಉಂಡವರು.

ರಾಷ್ಟ್ರ ರಾಜಕಾರಣದಲ್ಲಿ ಕಾಂಗ್ರೆಸ್‌ಗೆ ಪರ್ಯಾಯವಾಗಿ ಸಮರ್ಥ ಪ್ರತಿಪಕ್ಷ ಇರಬೇಕೆಂಬ ಜಯಪ್ರಕಾಶ್ ನಾರಾಯಣರ ಕನಸನ್ನು ನನಸಾಗಿಸಿದರು. ಅಧಿಕಾರಕ್ಕೆ ಅನೇಕ ರಾಜಕಾರಣಿಗಳು



ಉದಯವಾಹಿನಿ ಚಿತ್ರ

ಬಂದು ಹೋಗಿದ್ದಾರೆ. ಬಹಳ ಜನರ ಹೆಸರೇ ನೆನಪಿಲ್ಲ. ಆದರೆ ಹೆಗಡೆಯವರ ವ್ಯಕ್ತಿತ್ವ ಶಾಶ್ವತವಾದದ್ದು.

ಅವರು ಬೇರೆಯವರ ಮನಸು ನೋಯಿಸುವ ವ್ಯಕ್ತಿಯಲ್ಲ. ಸ್ವಾರ್ಥವೂ ಇಲ್ಲ, ಬೇರೆಯವರ ಸೊತ್ತಿಗೆ ಆಸೆಯನ್ನೂ ಪಡುವುದಿಲ್ಲ. ಎಲ್ಲರನ್ನೂ ನಂಬಿ ಮೋಸ ಹೋಗುವುದೇ ಅವರ ದೌರ್ಬಲ್ಯ. ಒಮ್ಮೆ ನಾನು ನಿಮ್ಮ ಜೀವನದ ಆದರ್ಶ ವ್ಯಕ್ತಿ ಯಾರು? ಎಂದು ಕೇಳಿದೆ. ಅದಕ್ಕೆ ನೆಹರೂ ಎಂದರು.

ಯಾಕೆ? ಎಂದೆ ಅದಕ್ಕವರು, ನೆಹರೂ ವಿಷನ್, ನೆಹರೂ ಸೆಕ್ಯುಲರಿಸಂ, ಪ್ರಜಾಪ್ರಭುತ್ವ ವಿಚಾರದಲ್ಲಿ ನೆಹರೂ ಬದ್ಧತೆ, ವಿವಿಧತೆಯೊಂದಿಗೆ ಏಕತೆ ಕಾಪಾಡಿ ಭಾರತವನ್ನು ಬಲಿಷ್ಠ ರಾಷ್ಟ್ರವಾಗಿಸುವ ಸಂಕಲ್ಪಕ್ಕೆ ಎಂದರು. ನನಗೆ ಆಶ್ಚರ್ಯ ವಾಯ್ತು.

# FSDA ನೋಟಿಸ್ ಬೆನ್ನಲ್ಲೇ ಬೆಂಗಳೂರಿನಲ್ಲಿ ಆಯೋಜಿಸಲಾಗಿದ್ದ ವಿವಾದಿತ ಪೆಪ್ಟೈಡ್ ಪಾರ್ಟಿ ರದ್ದು

• ಉದಯವಾಹಿನಿ, ಬೆಂಗಳೂರು

ರಾಜಧಾನಿ ಬೆಂಗಳೂರಿನ ಕೋರಮಂಗಲದಲ್ಲಿ ನಿಗದಿಯಾಗಿದ್ದ ಪೆಪ್ಟೈಡ್ ಪಾರ್ಟಿಯನ್ನು ರದ್ದುಗೊಳಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಪೆಪ್ಟೈಡ್ ಪಾರ್ಟಿ ಆಯೋಜಕರಿಗೆ ಕರ್ನಾಟಕ ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯು ನೋಟಿಸ್ ನೀಡಿದ ನಂತರ ಪಾರ್ಟಿಯನ್ನು ರದ್ದುಗೊಳಿಸಲಾಗಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ. ಪೆಪ್ಟೈಡ್ ಸಿದ್ಧತೆಗಳ ಕುರಿತು ವಿವರವಾದ ಮಾಹಿತಿ ಕೋರಿ ಎಫ್‌ಎಸ್‌ಡಿಎ ನೋಟಿಸ್ ನೀಡಿದ ಈ ಕಾರ್ಯಕ್ರಮ ರದ್ದುಗೊಳಿಸಲಾಗಿದೆ ಎಂದು ಸಾರ್ವಜನಿಕ ಪ್ರಕಟಣೆಯಲ್ಲಿ ತಿಳಿಸಲಾಗಿದೆ. ಅಪ್‌ಸರ್ಜ್ ಲ್ಯಾಬ್ಸ್' ಸಂಸ್ಥೆಯ ಜೊತೆ ಗುರುತಿಸಿಕೊಂಡಿರುವ ಅನುಷ್ಕಾ ಸಿಂಗ್ ಅವರು ಆಯೋಜಿಸಿದ್ದರು. ಆದರೆ ನಿಯಂತ್ರಣವಿಲ್ಲದ ಸ್ಥಳಗಳಲ್ಲಿ ಪೆಪ್ಟೈಡ್ ಬಳಕೆಯ ಅಪಾಯಗಳ ಕುರಿತು ಆರೋಗ್ಯ ತಜ್ಞರು ಎಚ್ಚರಿಸಿದ ಬೆನ್ನಲ್ಲೇ, ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆ ನೋಟಿಸ್ ನೀಡಿದ್ದು, ಪ್ರಚಾರ ಮಾಡಲು ಅಥವಾ ವಿತರಿಸಲು ಉದ್ದೇಶಿಸಿದ್ದ ಪೆಪ್ಟೈಡ್‌ಗಳ ಬಗ್ಗೆ ಸಂಪೂರ್ಣ ವಿವರ ನೀಡುವಂತೆ ಅಪ್‌ಸರ್ಜ್ ಲ್ಯಾಬ್ಸ್ ಎಲ್‌ಎಲ್‌ಪಿ ಸಂಸ್ಥೆಗೆ ಮತ್ತು ಆಯೋಜಕರಿಗೆ ಸೂಚಿಸಿದೆ.

# ಪೊಲೀಸರ ಕ್ರಮಕ್ಕೆ ಹೈಕೋರ್ಟ್ ತರಾಟೆ

• ಉದಯವಾಹಿನಿ, ಬೆಂಗಳೂರು

ರಾಜಧಾನಿ ಬೆಂಗಳೂರು ನಗರದಲ್ಲಿ ಹಾಸ್ಯ ಕಲಾವಿದ ಕುನಾಲ್ ಕಾಮ್ರಾ ಅವರ ಕಾರ್ಯಕ್ರಮ ರದ್ದುಪಡಿಸಿದ್ದ ವಿಚಾರ ಸಂಬಂಧ ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿದ್ದ ವ್ಯಕ್ತಿಯನ್ನು ವಿಚಾರಣೆ ಹೆಸರಿನಲ್ಲಿ ಪೊಲೀಸ್ ಠಾಣೆಗೆ ಕರೆದುಕೊಂಡು ಬಂದಿದ್ದ ವೈಟ್ ಫೀಲ್ಡ್ ಪೊಲೀಸರ ಕ್ರಮಕ್ಕೆ ಹೈಕೋರ್ಟ್ ತೀವ್ರ ಆಕ್ರೋಶ ವ್ಯಕ್ತಪಡಿಸಿ, ವೈಟ್ ಫೀಲ್ಡ್ ಠಾಣೆಯನ್ನು ಇನ್ನು ಮುಂದೆ ಡಾರ್ಕ್ ಫೀಲ್ಡ್ ಠಾಣೆಯನ್ನಾಗಿ ಬದಲಾಯಿಸಿಕೊಳ್ಳಿ ಎಂದು ತರಾಟೆಗೆ ತೆಗೆದುಕೊಂಡಿದೆ.ತಮ್ಮ ವಿರುದ್ಧದ ಪ್ರಕರಣ ರದ್ದು ಕೋರಿ ಮೋಹನ್ ಗೌಡ ಎಂಬುವರು ಸಲ್ಲಿಸಿದ್ದ ಅರ್ಜಿಯನ್ನು ಶನಿವಾರ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರಿದ್ದ ನ್ಯಾಯಪೀಠವು ಪೊಲೀಸ್ ಅಧಿಕಾರಿಗಳ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿ ವಿಚಾರಣೆ ಮುಂದೂಡಿತು. ವಿಚಾರಣೆಗೆ ಹಾಜರಾಗುವಂತೆ ನೋಟಿಸ್ ನೀಡಿ ಕಾಲಾವಕಾಶ ನೀಡಿದ್ದರೂ, ಅದಕ್ಕೂ ಮುನ್ನವೇ ಅರ್ಜಿದಾರರನ್ನು ವಶಕ್ಕೆ ಪಡೆಯಲಾಗಿದೆ. ಕಾನೂನು ಪ್ರಕ್ರಿಯೆ ಅನುಸರಿಸದೇ ಪೊಲೀಸ್ ಅಧಿಕಾರಿಗಳು ಉಡುಪಿಗೆ ಹೋಗಿ ಅರ್ಜಿದಾರರನ್ನು ಕರೆತರಲಾಗಿದೆ. ಅದರ ಅಗತ್ಯವಿತ್ತೇ ಎಂದು ಪೀಠ ಪ್ರಶ್ನಿಸಿತು.

# ನೇಪಾಳ ಪ್ರವಾಹ: ಇನ್ಫೋಸಿಸ್ ಪಬ್ಲಿಕ್ ಸರ್ವಿಸಸ್ CEO ನಾಪತ್ತೆ

• ಉದಯವಾಹಿನಿ, ಬೆಂಗಳೂರು

ಇನ್ಫೋಸಿಸ್ ಪಬ್ಲಿಕ್ ಸರ್ವಿಸಸ್‌ನ ಮುಖ್ಯಸ್ಥ ಲ್ಯಾಕ್ಸ್ ಗೋಪ್ಪಿಸೆಟ್ಟಿ ಅವರು ನೇಪಾಳದಲ್ಲಿ ಸಂಭವಿಸಿದ ಭೀಕರ ಪ್ರವಾಹದ ಬಳಿಕ ಸಂಪರ್ಕಕ್ಕೆ ಸಿಗುತ್ತಿಲ್ಲ ಎಂದು ಐಟಿ ಸೇವಾ ಸಂಸ್ಥೆ ಇನ್ಫೋಸಿಸ್ ತಿಳಿಸಿದೆ. ಐಟಿ ಸೇವಾ ದಿಗ್ಗಜ ಇನ್ಫೋಸಿಸ್‌ನ ಅಂಗಸಂಸ್ಥೆಯಾಗಿರುವ ಇನ್ಫೋಸಿಸ್ ಪಬ್ಲಿಕ್ ಸರ್ವಿಸಸ್ ಮುಖ್ಯವಾಗಿ ಅಮೆರಿಕ ಮತ್ತು ಕೆನಡಾದ ಸಾರ್ವಜನಿಕ ವಲಯಕ್ಕೆ ಸೇವೆಗಳನ್ನು ಒದಗಿಸುತ್ತದೆ.

ಗೋಪ್ಪಿಸೆಟ್ಟಿ ಅವರು ವೈಯಕ್ತಿಕ ಪ್ರವಾಸದ ಹಿನ್ನೆಲೆಯಲ್ಲಿ ಈ ಪ್ರದೇಶಕ್ಕೆ ಭೇಟಿ ನೀಡಿದ್ದರು. ಅವರ ಸುರಕ್ಷತೆ ಮತ್ತು ಕ್ಷೇಮವನ್ನು ಖಚಿತಪಡಿಸಿಕೊಳ್ಳುವುದು ಸದ್ಯ ತಮ್ಮ ಪ್ರಮುಖ ಆದ್ಯತೆಯಾಗಿದೆ ಎಂದು ಬೆಂಗಳೂರಿನಲ್ಲಿ ಕೇಂದ್ರ ಕಚೇರಿ ಹೊಂದಿರುವ ಇನ್ಫೋಸಿಸ್ ಹೇಳಿಕೆಯಲ್ಲಿ ತಿಳಿಸಿದೆ. ವೈಯಕ್ತಿಕ ಪ್ರವಾಸದ ಹಿನ್ನೆಲೆಯಲ್ಲಿ ಈ ಪ್ರದೇಶಕ್ಕೆ ಭೇಟಿ ನೀಡಿದ್ದ ನಮ್ಮ ಸಹೋದ್ಯೋಗಿ ಲ್ಯಾಕ್ಸ್ ಗೋಪ್ಪಿಸೆಟ್ಟಿ ಅವರು ಸದ್ಯ ಸಂಪರ್ಕಕ್ಕೆ ಸಿಗುತ್ತಿಲ್ಲ ಎಂದು ಇನ್ಫೋಸಿಸ್ ತಿಳಿಸಿದೆ. ಗೋಪ್ಪಿಸೆಟ್ಟಿ ಅವರೊಂದಿಗೆ ಸಂಪರ್ಕ ಸಾಧಿಸಲು ಹಾಗೂ ಹೆಚ್ಚಿನ ಮಾಹಿತಿ ಸಂಗ್ರಹಿಸಲು ಸಂಬಂಧಿತ ಸಂಸ್ಥೆಗಳೊಂದಿಗೆ ಕಂಪನಿ ಕಾರ್ಯನಿರ್ವಹಿಸುತ್ತಿದೆ ಎಂದು ಇನ್ಫೋಸಿಸ್ ಹೇಳಿದೆ. ಕಂಪನಿಯು ಗೋಪ್ಪಿಸೆಟ್ಟಿ ಅವರ ಕುಟುಂಬದೊಂದಿಗೆ ನಿರಂತರ ಸಂಪರ್ಕದಲ್ಲಿದ್ದು, ಈ ಕಷ್ಟದ ಸಮಯದಲ್ಲಿ ಅಗತ್ಯವಿರುವ ಎಲ್ಲಾ ನೆರವನ್ನು ಒದಗಿಸುತ್ತಿದೆ ಎಂದು ತಿಳಿಸಿದೆ. ಲ್ಯಾಕ್ಸ್ ಮತ್ತು ಈ ದುರಂತದಿಂದ ಬಾಧಿತರಾದ ಎಲ್ಲರೊಂದಿಗೂ ನಮ್ಮ ಚಿಂತನೆಗಳಿವೆ ಎಂದು ಇನ್ಫೋಸಿಸ್ ಹೇಳಿದೆ.

# ರಾಜ್ಯ ಸರ್ಕಾರ ಸಮರ್ಪಕವಾಗಿ ಸ್ಪಂದಿಸುತ್ತಿಲ್ಲ: ಟಿಬೆಟ್‌ನಲ್ಲಿ ಸಿಲುಕಿರುವ 35 ಕನ್ನಡಿಗರ ಅಳಲು

## ನಾವು ಹಲವಾರು ಇಲಾಖೆಗಳನ್ನು ಸಂಪರ್ಕಿಸಿದ್ದೇವೆ ಎಂದು ಕೃಷ್ಣ ಹೇಳಿದರು. ಆದರೆ ಇದುವರೆಗೂ ಪ್ರತಿಕ್ರಿಯೆ ಬಂದಿಲ್ಲ

• ಉದಯವಾಹಿನಿ, ಬೆಂಗಳೂರು

1 ಪ್ರಸ್ತುತ ಟಿಬೆಟ್ ಸ್ವಾಯತ್ತ ಪ್ರದೇಶ
2 ನೇಪಾಳ ಟಿಎಆರ್‌ನಲ್ಲಿ ಸಿಲುಕಿರುವ
3 ಪತ್ತೆಹಚ್ಚುವ ಪ್ರಯತ್ನಗಳು ನಡೆಯುತ್ತಿವೆ.

ಟಿಬೆಟ್‌ನಲ್ಲಿ ಸಿಲುಕಿರುವ 70 ಸದಸ್ಯರ ಪ್ರವಾಸಿ ಗುಂಪಿನ ಭಾಗವಾಗಿರುವ ಕರ್ನಾಟಕದ ಸುಮಾರು 35 ಜನರು, ಪ್ರವಾಹ ಪೀಡಿತ ಸ್ಥಳದಿಂದ ತಮ್ಮನ್ನು ಸ್ಥಳಾಂತರಿಸಲು ರಾಜ್ಯ ಸರ್ಕಾರ ಸಮರ್ಪಕವಾಗಿ ಸ್ಪಂದಿಸಿಲ್ಲ ಎಂದು ಆರೋಪಿಸಿದ್ದಾರೆ. ಪ್ರಸ್ತುತ ಟಿಬೆಟ್ ಸ್ವಾಯತ್ತ ಪ್ರದೇಶದ (ಫಿನಯಲಂನಲ್ಲಿರುವ ಈ ತಂಡ ಕರ್ನಾಟಕ ಸರ್ಕಾರದ ನೋಂದಣಿ ನಮೂನೆಯನ್ನು ಭರ್ತಿ ಮಾಡಿದ್ದೇವೆ ಎಂದು ಹೇಳಿದೆ. ತಂಡದೊಂದಿಗೆ ಪ್ರಯಾಣಿಸಿದ ಬೆಂಗಳೂರಿನ ನಿವಾಸಿ ಕೃಷ್ಣ ಅವರ ಪ್ರಕಾರ, ಕರ್ನಾಟಕ ಸರ್ಕಾರದಿಂದ ಸಹಾಯವಾಣಿ ಸೇರಿದಂತೆ ಹಲವಾರು ಕರೆಗಳು ಬಂದವು. ನಾವು ಬಹು ಕರೆ ಮಾಡಿದವರಿಗೆ ಸ್ಥಳಾಂತರ ಬಯಸಿದ್ದೇವೆ ಎಂದು ತಿಳಿಸಿದ್ದೇವೆ, ಆದರೆ ಅದರ ನಂತರ ಯಾವುದೇ ಮಾಹಿತಿ ಸಿಗುತ್ತಿಲ್ಲ ಎಂದು ತಿಳಿಸಿದ್ದಾರೆ.

ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಮತ್ತು ಕಂದಾಯ ಸಚಿವರು ಸೇರಿದಂತೆ ರಾಜ್ಯವು ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ಗಮನಿಸುತ್ತಿದ್ದು, ರಾಜ್ಯದ ಜನರನ್ನು ರಕ್ಷಿಸಲು ಮತ್ತು ಸುರಕ್ಷಿತವಾಗಿ ಕರೆತರಲು ನವದೆಹಲಿಯ ವಿದೇಶಾಂಗ ಸಚಿವಾಲಯ ಮತ್ತು ಕರ್ನಾಟಕ ಭವನದೊಂದಿಗೆ ನಿರಂತರ ಸಂಪರ್ಕದಲ್ಲಿದೆ ಎಂಬ ಕರ್ನಾಟಕ ಸರ್ಕಾರದ ಹೇಳಿಕೆಗಳ ನಡುವೆ ಅವರ ಆರೋಪಗಳು ಬಂದಿವೆ.



ಉದಯವಾಹಿನಿ ಚಿತ್ರ

ನೇಪಾಳ ಮತ್ತು ಟಿಎಆರ್‌ನಲ್ಲಿ ಸಿಲುಕಿರುವ ಅಥವಾ ಕಾಣೆಯಾಗಿರುವ ಕರ್ನಾಟಕದ 28 ಜನರ ವಿವರಗಳನ್ನು ರಾಜ್ಯ ತುರ್ತು ಕಾರ್ಯಾಚರಣೆ ಕೇಂದ್ರ (ಎಸ್‌ಇಒಸಿ) ಇಲ್ಲಿಯವರೆಗೆ ಸಂಗ್ರಹಿಸಿದೆ. ಎಸ್‌ಇಒಸಿ ದತ್ತಾಂಶದ ಪ್ರಕಾರ, ಎಸ್‌ಇಒಸಿ ದತ್ತಾಂಶದ ಪ್ರಕಾರ, ಇಬ್ಬರು ಮೈಸೂರಿನವರು, ತಲಾ ಒಬ್ಬರು ಧಾರವಾಡ, ಉಡುಪಿ ಮತ್ತು ವಿಜಯನಗರದವರಾಗಿದ್ದಾರೆ. ಕಾಣೆಯಾದವರಲ್ಲಿ ಹೆಚ್ಚಿನವರು ನೇಪಾಳದ ರಸುವಾ ಜಿಲ್ಲೆಯ ತಿಮುರೆಯಲ್ಲಿದ್ದರೆ, ಕೆಲವರು ಟಿಬೆಟ್ ಸ್ವಾಯತ್ತ ಪ್ರದೇಶದ (ಟಿಎಆರ್) ಡಾರ್ಚೆನ್‌ನಲ್ಲಿದ್ದಾರೆ ಎಂದು ವರದಿಯಾಗಿದೆ. ನಾಲ್ವರು ಸುರಕ್ಷಿತರೆಂದು ದೃಢಪಡಿಸಲಾಗಿದ್ದು, ಉಳಿದ 24 ಜನರನ್ನು ಪತ್ತೆಹಚ್ಚುವ ಪ್ರಯತ್ನಗಳು ನಡೆಯುತ್ತಿವೆ. ಪ್ರವಾಸಿಗರು ಈಗ ಕಠ್ಮಂಡು ತಲುಪಲು ಸಹಾಯವನ್ನು ಕೋರುತ್ತಿದ್ದಾರೆ, ವಿಶೇಷವಾಗಿ ಸೀಮಿತ ವಿಮಾನ ಲಭ್ಯತೆ ಮತ್ತು ಹೆಚ್ಚಿನ ದರ ವಿಧಿಸಲಾಗುತ್ತಿದೆ. ಗುಂಪಿನ ಹಲವಾರು ಸದಸ್ಯರು ಹಿರಿಯ ನಾಗರಿಕರಾಗಿದ್ದು, ಪ್ರವಾಹ ಪೀಡಿತ ಮಾರ್ಗಗಳ ಮೂಲಕ ಪ್ರಯಾಣ ಮಾಡುವುದು ಕಷ್ಟವಾಗಿದೆ. ಸದ್ಯ ತಂಡ ಬೆಂಗಳೂರು ಮೂಲದ ಪ್ರವಾಸ ನಿರ್ವಾಹಕರು ಮತ್ತು ಸ್ಥಳೀಯ ಮಾರ್ಗದರ್ಶಕರೊಂದಿಗೆ ಸಮನ್ವಯ ಸಾಧಿಸುತ್ತಿದೆ.

**ನಾವು ಹಲವಾರು ಇಲಾಖೆಗಳನ್ನು ಸಂಪರ್ಕಿಸಿದ್ದೇವೆ ಎಂದು ಕೃಷ್ಣ ಹೇಳಿದರು. ಅವರು ಸಹಾಯ ಕೋರಿ ಸುಮಾರು 45 ಅಧಿಕೃತ ವಿಳಾಸಗಳಿಗೆ ಇಮೇಲ್‌ಗಳನ್ನು ಕಳುಹಿಸಿದ್ದಾರೆ, ಆದರೆ ಇದುವರೆಗೂ ಪ್ರತಿಕ್ರಿಯೆ ಬಂದಿಲ್ಲ ಎಂದು ಅಳಲು ತೋಡಿಕೊಂಡಿದ್ದಾರೆ.-ಕೃಷ್ಣ**

### ಪ್ರದೇಶವನ್ನು ಖಾಲಿ ಮಾಡಿ

**70 ಪ್ರವಾಸಿಗರ ದೊಡ್ಡ ಗುಂಪಿನಲ್ಲಿ ಕರ್ನಾಟಕ, ಚೆನ್ನೈ, ಮುಂಬೈ ಮತ್ತು ನವದೆಹಲಿಯ ಜನರು ಸೇರಿದ್ದಾರೆ. ಶುಕ್ರವಾರ ಬೆಳಿಗ್ಗೆ ವೇಳೆಗೆ ಚೀನಾದ ಅಧಿಕಾರಿಗಳು ಆ ಪ್ರದೇಶವನ್ನು ಖಾಲಿ ಮಾಡುವಂತೆ ತಿಳಿಸಿದ ನಂತರ ಅವರು ನ್ಯಾಲಂ ತಲುಪಿದರು.**

### ಐದು ಸ್ಥಳಗಳಲ್ಲಿ ಭೂಕುಸಿತ

**ನೇಪಾಳ ಗಡಿಯ ಕಡೆಗೆ ಪ್ರಯಾಣಿಸುವಾಗ ಸುಮಾರು ಐದು ಸ್ಥಳಗಳಲ್ಲಿ ಭೂಕುಸಿತಗಳು ಕಂಡುಬಂದಿವೆ ಎಂದು ತಂಡ ತಿಳಿಸಿದೆ. ರಸುವಾಗಧಿ ಬಳಿ ಮೊಣಕಾಲು ಆಳದ ಮಣ್ಣು ಮತ್ತು ಬೀಳುವ ಅವಶೇಷಗಳನ್ನು ದಾಟಿ ಕಠಿಣ ಭೂಪ್ರದೇಶದ ಮೂಲಕ ಸುಮಾರು ನಾಲ್ಕು ಕಿಲೋಮೀಟರ್ ನಡೆಯಬೇಕಾಯಿತು.**

# ಬರದಪಟ್ಟಿಯಲ್ಲಿ ಬರದನಾಡನ್ನೇ ಕೈ ಬಿಟ್ಟ ಸರ್ಕಾರ.ತುರ್ತು ಘೋಷಣೆಗೆ ಸಿಎಂ,ಡಿಸಿಎಂಗೆ ಶಾಸಕರು ಪತ್ರ.

## ಅಖಂಡ ಕೂಡ್ಲಿಗಿ ತಾಲ್ಲೂಕಿನಾದ್ಯಂತ ಸ್ಥಾಪಿಸಲಾಗಿರುವ ಮಳೆ ಮಾಪನ ಕೇಂದ್ರಗಳು ಹಳೆಯದಾಗಿದ್ದು ಸೂಕ್ತ ನಿರ್ವಹಣೆ ಇಲ್ಲದೆ ದುಸ್ಥಿತಿಯಲ್ಲಿವೆ

• **ಉದಯವಾಹಿನಿ ಕೂಡ್ಲಿಗಿ. :-**

ಯಾವುದೇ ನೀರಾವರಿ ಮೂಲಗಳಿಲ್ಲದ ಮಳೆಯನ್ನೇ ನಂಬಿ ಬದುಕುವ ರೈತರ ಮಳೆಯಾಶ್ರಿತ ಪ್ರದೇಶವಾಗಿರುವ ಬರದ ನಾಡೆಂದೆ ಹೆಸರಾಗಿರುವ ಕೂಡ್ಲಿಗಿಯಂತಹ ಹಿಂದುಳಿದ ತಾಲ್ಲೂಕನ್ನ

**1 : ಅತ್ಯಂತ ಗಂಭೀರವಾಗಿ ಪರಿಗಣಿಸಿ**
**2 : ಮಾಪನ ವ್ಯವಸ್ಥೆಯ ನಿರ್ಲಕ್ಷ್ಯಕ್ಕೆ**
**3 : ಬೀಜ ಗೊಬ್ಬರ ತಂದು ಬಿತ್ತನೆ ಮಾಡಿ**

ಈ ಬಾರಿಯ ಸರ್ಕಾರದ ಬರದ ಪಟ್ಟಿಯಲ್ಲಿ ಕೈಬಿಟ್ಟದ್ದು ಸಕಾಲಕ್ಕೆ ಮಳೆಯಾಗದೆ ಮುಂಗಾರು ಕೈಕೊಟ್ಟ ಹಿನ್ನೆಲೆಯಲ್ಲಿ ನೂರಾರು ಕುಟುಂಬ ಹರಸಿ ಹೋಗುತ್ತಿರುವುದನ್ನು ಪರಿಗಣಿಸಿ ಆದಷ್ಟು ತುರ್ತಾಗಿ ಬರದ ಪಟ್ಟಿಯಲ್ಲಿ ಕೂಡ್ಲಿಗಿ ಕೊಟ್ಟೂರು ತಾಲ್ಲೂಕನ್ನು ಸೇರಿಸಿ ಘೋಷಣೆ ಮಾಡುವಂತೆ ಕೂಡ್ಲಿಗಿ ಶಾಸಕ ಡಾ ಶ್ರೀನಿವಾಸ ಸರ್ಕಾರದ ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿಗಳಿಗೆ ಶುಕ್ರವಾರ ತಮ್ಮ ಶಾಸಕರ ಲೆಟರ್ ಹೆಡ್ ನ ಪತ್ರದ ಮೂಲಕ ಮನವಿ ಮಾಡಿದ್ದಾರೆ.ಶಾಸಕ ಡಾ ಶ್ರೀನಿವಾಸ ತಮ್ಮ ಪತ್ರದಲ್ಲಿ ಸರ್ಕಾರಕ್ಕೆ ಮನವಿ ಮಾಡಿ ತಿಳಿಸಿರುವಂತೆ ಡಾ. ಡಿ. ಎಂ. ನಂಜುಂಡಪ್ಪ ವರದಿ ಹಾಗೂ ಪ್ರೊ. ಗೋವಿಂದರಾವ್ ಅವರ ಪ್ರಾದೇಶಿಕ ಅಸಮತೋಲನ


ಉದಯವಾಹಿನಿ ಚಿತ್ರ

ಅಧ್ಯಯನ ವರದಿಗಳ ಪ್ರಕಾರ, ಕೂಡ್ಲಿಗಿ ಕ್ಷೇತ್ರವು ರಾಜ್ಯದಲ್ಲೇ ''ಅತ್ಯಂತ ಹಿಂದುಳಿದ ಪ್ರದೇಶ'' ಎಂದು ಗುರುತಿಸಲ್ಪಟ್ಟಿದೆ. ಭೌಗೋಳಿಕವಾಗಿ ನಿರಂತರ ಬರಪೀಡಿತವಾಗಿರುವ ಈ ಭಾಗದಲ್ಲಿ ಯಾವುದೇ ಬೃಹತ್ ಜಲಮೂಲಗಳು (ನದಿ ಅಥವಾ ಜೀವಂತ ಜಲಾಶಯಗಳು) ಇಲ್ಲ. ವಾರ್ಷಿಕ ಸರಾಸರಿ ಮಳೆ ತೀವ್ರ ಕೊರತೆಯಾಗುತ್ತಿದ್ದು, ಕೃಷಿ ಹಾಗೂ ಜೀವನೋಪಾಯವಿಲ್ಲದೆ ಪ್ರತಿವರ್ಷ ಸಾವಿರಾರು ಕುಟುಂಬಗಳು ಗುಳೇ ಹೋಗುವುದು ಹೆಚ್ಚಾಗುತ್ತಿದೆ. ವಿಜಯನಗರ ಜಿಲ್ಲೆಯಲ್ಲಿ ಹೊಸಪೇಟೆ, ಹಗರಿಬೊಮ್ಮನಹಳ್ಳಿ,ಹರಪನಹಳ್ಳಿ ಹಡಗಲಿ ತಾಲ್ಲೂಕುಗಳು ತುಂಗಭದ್ರಾ ನದಿಯ ತಟದಲ್ಲಿದ್ದು, ಸಂಪೂರ್ಣ ನೀರಾವರಿ ಪ್ರದೇಶವಾಗಿದ್ದರು ಅವುಗಳನ್ನು ಬರಪೀಡಿತ ತಾಲ್ಲೂಕುಗಳೆಂದು ಈಗಾಗಲೇ ಘೋಷಣೆ ಮಾಡಲಾಗಿದೆ ಆದರೆ



> ತಾಲೂಕಿನಲ್ಲಿ ಜನ ಜಾನುವಾರುಗಳಿಗೆ ಕುಡಿಯುವ ನೀರಿಗೂ ಅಭಾವವಿದ್ದು ಮಳೆಯನ್ನೇ ನಂಬಿದ ರೈತರು ಆರಂಭದ ಮಳೆ ಬಿದ್ದಿದ್ದರಿಂದ ಸಾಲ ಮಾಡಿ ಬೀಜ ಗೊಬ್ಬರ ತಂದು ಬಿತ್ತನೆ ಮಾಡಿದ್ದರೂ ಕೈಕೊಟ್ಟ ಮಳೆಯಿಂದ ಬೆಳೆ ನಂಬಿದ ರೈತನಿಗೆ ದಿನಕಳೆದಂತೆ ಒಣಗುವ ಬೆಳೆ ಕಂಡು ಕಣ್ಣೀರಧಾರೆ ಹರಿಸುತ್ತಿದ್ದಾನೆ .
> -ಕೂಡ್ಲಿಗಿ ಶಾಸಕ ಡಾ ಶ್ರೀನಿವಾಸ

ಯಾವುದೇ ನದಿ ಅಥವಾ ಶಾಶ್ವತ ಜಲಮೂಲಗಳಿಲ್ಲದ ಹಾಗೂ ಜೀವಂತ ಕೆರೆಗಳಿದ್ದರು ಅದರಲ್ಲಿ ನೀರು ಕಾಣದೆ ಬಿರುಕು ಬಿಟ್ಟ ನೆಲದಂತಿರುವ ಕೆರೆಗಳನ್ನು ಕಾಣಬಹುದಾಗಿದ್ದು , ಸಂಪೂರ್ಣವಾಗಿ ಮಳೆಯನ್ನೇ ನಂಬಿ ಬದುಕುವ ರೈತರೇ ಹೆಚ್ಚಾಗಿರುವ ಕೂಡ್ಲಿಗಿ ಮತ್ತು ಕೊಟ್ಟೂರು ತಾಲೂಕುಗಳನ್ನು ಬರಪೀಡಿತ ಪಟ್ಟಿಯಿಂದ ಕೈಬಿಟ್ಟಿರುವುದು ಅತ್ಯಂತ ಖೇದಕರ ಮತ್ತು ವಿಪರ್ಯಾಸ ಸಂಗತಿಯಾಗಿದೆ.

ಅಖಂಡ ಕೂಡ್ಲಿಗಿ ತಾಲ್ಲೂಕಿನಾದ್ಯಂತ ಸ್ಥಾಪಿಸಲಾಗಿರುವ ಮಳೆ ಮಾಪನ ಕೇಂದ್ರಗಳು ಹಳೆಯದಾಗಿದ್ದು ಸೂಕ್ತ ನಿರ್ವಹಣೆ ಇಲ್ಲದೆ ದುಸ್ಥಿತಿಯಲ್ಲಿವೆ ತಾಂತ್ರಿಕವಾಗಿ ತಪ್ಪು ದತ್ತಾಂಶವನ್ನು

> ಕೃಷಿ ಚಟುವಟಿಕೆ ನಿಲ್ಲಿಸಿ ತುತ್ತಿನ ಚೀಲ ತುಂಬಿಸಿಕೊಳ್ಳಲು ಜೀವನ ನಿರ್ವಹಣೆಗೆ ದಿಕ್ಕುಕಾಣದೆ ಕಾಫಿಸೀಮೆ, ನಗರ ಪ್ರದೇಶಗಳತ್ತ ಉದ್ಯೋಗ ಹರಸಿ ಗುಳೇ ಹೋಗಿರುವ ನೂರಾರು ಕುಟುಂಬಗಳ ಸಾಕ್ಷ್ಯಗಳು ನಮ್ಮಗಳ ಕಣ್ಣ ಮುಂದೆ ಇವೆ.ಇತ್ತೀಚೆಗೆ ಜರುಗಿದ 16ನೇ ವಿಧಾನಸಭೆಯ 10ನೇ ಅಧಿವೇಶನದಲ್ಲಿ ಕೂಡ್ಲಿಗಿ ಮತ್ತು ಕೊಟ್ಟೂರು ತಾಲೂಕುಗಳ ಭೀಕರ ಬರ ಪರಿಸ್ಥಿತಿಯ ಬಗ್ಗೆ ಚುಕ್ಕೆ ಗುರುತಿನ ಪ್ರಶ್ನೆಯ ಮೂಲಕ ಸರ್ಕಾರದ ಗಮನಕ್ಕೆ ತರಲಾಗಿತ್ತು.

ದಾಖಲಿಸುತ್ತಿವೆ.ಇಂತಹ ಮಳೆ ಮಾಪನ ದತ್ತಾಂಶವನ್ನು ಆಧರಿಸಿ ಕೂಡ್ಲಿಗಿ ಮತ್ತು ಕೊಟ್ಟೂರು ತಾಲ್ಲೂಕುಗಳಲ್ಲಿ ಸಮರ್ಪಕ ಮಳೆಯಾಗಿದೆ ಎಂದು ನಿರ್ಧರಿಸಿ ತಾಲ್ಲೂಕುಗಳನ್ನು ಬರಪೀಡಿತ ಪಟ್ಟಿಯಿಂದ ಹೊರಗಿಟ್ಟಿರುವುದು ಕಂದಾಯ ಹಾಗೂ ಮಳೆ ಮಾಪನ ವ್ಯವಸ್ಥೆಯ ತೀವ್ರ ನಿರ್ಲಕ್ಷ್ಯಕ್ಕೆ ಹಿಡಿದ ಕನ್ನಡಿಯಾಗಿದೆ.

ಈ ಕ್ಷೇತ್ರದ ವಾಸ್ತವಿಕ ಪರಿಸ್ಥಿತಿ, ಮಳೆ ಕೊರತೆ ಹಾಗೂ ಜನ-ಜಾನುವಾರುಗಳು ಅನುಭವಿಸುತ್ತಿರುವ ತೀವ್ರಯಾತನೆಯನ್ನು ಸದನದಲ್ಲಿ ವಿವರವಾಗಿ ಮನವರಿಕೆ ಮಾಡಿಕೊಟ್ಟಿದ್ದರೂ ಸಹ, ಸರ್ಕಾರವು ಈವರೆಗೆ ಕೂಡ್ಲಿಗಿ ಮತ್ತು ಕೊಟ್ಟೂರು ತಾಲ್ಲೂಕುಗಳನ್ನು ಬರಪೀಡಿತ ತಾಲ್ಲೂಕುಗಳೆಂದು ಘೋಷಿಸದಿರುವುದು ಅತ್ಯಂತ ಖೇದಕರ ಹಾಗೂ ಕ್ಷೇತ್ರ ಜನತೆಗೆ ಎಸಗಿರುವ ಅನ್ಯಾಯವಾಗಿದೆ.

# ದೇವರಹಿಪ್ಪರಗಿ ಮತಕ್ಷೇತ್ರವನ್ನು ಬರಪೀಡಿತವೆಂದು ಘೋಷಿಸುವಂತೆ ಶಾಸಕ ರಾಜುಗೌಡ ಪಾಟೀಲ್ ಸರಕಾರಕ್ಕೆ ಮನವಿ

• **ಉದಯವಾಹಿನಿ, ಬಸವನಬಾಗೇವಾಡಿ :**

ರಾಜ್ಯ ಸರ್ಕಾರ ಜಿಲ್ಲೆಯಲ್ಲಿ ಕೇವಲ ಮೂರು ತಾಲ್ಲೂಕುಗಳನ್ನು ಬರಪೀಡಿತವೆಂದು ಘೋಷಿಸಿದ್ದು. ಅತಿ ಹೆಚ್ಚು ಹಿಂದುಳಿದ ಕ್ಷೇತ್ರವಾದ ದೇವರಹಿಪ್ಪರಗಿ ಮತಕ್ಷೇತ್ರವ್ಯಾಪ್ತಿಯ ಬಸವನಬಾಗೇವಾಡಿ ತಾಳಿಕೋಟಿ ಹಾಗೂ ದೇವರಹಿಪ್ಪರಗಿ ತಾಲ್ಲೂಕುಗಳನ್ನು ಪಟ್ಟಿಯಿಂದ ಕೈ ಬಿಟ್ಟಿರುವುದು ಸರ್ಕಾರ ರೈತ ವಿರೋಧಿ ಧೋರಣೆಗೆ ಸಾಕ್ಷಿಯಾಗಿದೆ ಎಂದು ದೇವರ ಹಿಪ್ಪರಗಿ ಮತಕ್ಷೇತ್ರದ ಶಾಸಕ ರಾಜುಗೌಡ ಬಿ ಪಾಟೀಲ ಅವರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಕುರಿತು ನಮ್ಮ ಕಚೇರಿಯಲ್ಲಿ ಪತ್ರಿಕಾಗೋಷ್ಠಿ ನಡೆಸಿದ ಅವರು,ಮುಂಗಾರು ಹಂಗಾಮಿನ ಆರಂಭದಲ್ಲಿ ಸತತ ಎರಡು ತಿಂಗಳು ಸಮರ್ಪಕ ಮಳೆಯಾಗಿಲ್ಲ. ರೈತರು ಎರಡು ಮೂರು ಬಾರಿ ಬಿತ್ತನೆ ಮಾಡಿ ಬೀಜ, ಗೊಬ್ಬರ, ಕೂಲಿ ಸೇರಿದಂತೆ ಅಪಾರ ಹಣ ಖರ್ಚು ಮಾಡಿದ್ದಾರೆ. ರೈತರು ಸಂಪೂರ್ಣ ನಷ್ಟಕ್ಕೆ ಒಳಗಾಗಿದ್ದಾರೆ. ಸಾಲ ಮಾಡಿ ಕೃಷಿ ಮಾಡಿರುವ ಅನ್ನದಾತರು ದಿಕ್ಕು ತೋಚಿದ ಸ್ಥಿತಿಗೆ ತಲುಪಿದ್ದಾರೆ.

ಇಂತಹ ಗಂಭೀರ ಪರಿಸ್ಥಿತಿಯಲ್ಲಿ ದೇವರಹಿಪ್ಪರಗಿ ಮತಕ್ಷೇತ್ರದ ಎಲ್ಲಾ ತಾಲ್ಲೂಕುಗಳನ್ನು ಬರಪೀಡಿತವೆಂದು ಘೋಷಿಸಿ ಸರ್ಕಾರದಿಂದ ಪರಿಹಾರ ದೊರೆಯಲಿದೆ ಎಂಬ ನಿರೀಕ್ಷೆಯಲ್ಲಿ ರೈತರು ಕಾಯುತ್ತಿದ್ದರು. ಆದರೆ ರೈತರ ನಿರೀಕ್ಷೆಗೆ ಸರ್ಕಾರವೇ ಕೊಳ್ಳಿ ಇಟ್ಟಿದೆ. ಸರ್ಕಾರದ


ಉದಯವಾಹಿನಿ ಚಿತ್ರ

> ಈ ಕೂಡಲೇ ಬರ ಪರಿಹಾರ, ಸಾಲ ಮನ್ನಾಕ್ಕೆ ಮುಂದಾಗಬೇಕು. ವಿಮಾ ಕಂಪನಿಗಳು ಪಾರದರ್ಶಕವಾಗಿ ಬೆಳೆ ವಿಮೆ ಪರಿಹಾರ ಘೋಷಿಸಲಿ. ನನ್ನ ಕ್ಷೇತ್ರ ಸಂಪೂರ್ಣ ನೀರಾವರಿ ಕ್ಷೇತ್ರವಲ್ಲ .ಅತಿ ಹಿಂದುಳಿದ ಕ್ಷೇತ್ರವಾಗಿದ್ದು. 2ನೇ ಪಟ್ಟಿಲ್ಲಾದರೂ ನನ್ನ ಕ್ಷೇತ್ರ ಬರಪಟ್ಟಿಗೆ ಸೇರಲಿದೆ ಎಂಬ ಆಶಾಭಾವನೆ ಇದೆ.
> -ರಾಜುಗೌಡ ಬಿ ಪಾಟೀಲ, ಮಾನ್ಯ ಶಾಸಕರು, ದೇವರಹಿಪ್ಪರಗಿ ಮತಕ್ಷೇತ್ರ

ಈ ನಿರ್ಧಾರ ಕ್ಷೇತ್ರದ ರೈತರ ಮೇಲಿನ ಸ್ಪಷ್ಟ ಅನ್ಯಾಯವಾಗಿದೆ ಎಂದು ಕಿಡಿ ಕಾರಿದ್ದಾರೆ.

**ದೇವರಹಿಪ್ಪರಗಿ ಮತಕ್ಷೇತ್ರ ಸಂಪೂರ್ಣ ನೀರಾವರಿ ಕ್ಷೇತ್ರವಲ್ಲ**

> ಡಿಕೆಶಿ ನಾಯಕತ್ವದ ಸರಕಾರ ರೈತಪರ ಸರ್ಕಾರವಾಗಬೇಕಾದರೆ ರೈತ ಸಮುದಾಯಕ್ಕೆ ನ್ಯಾಯ ಕೊಡಿಸಲು ಮುಂದಾಗಬೇಕು. ರೈತರ ಸಂಕಷ್ಟಗಳಿಗೆ ದಿಟ್ಟ ನಿಲುವು ಹೊಂದುವುದರ ಮೂಲಕ ಸಕಾರಾತ್ಮಕವಾಗಿ ಸ್ಪಂದಿಸಬೇಕು.

ಸರಕಾರ ಐದು ಗ್ಯಾರಂಟಿಯೊಂದಿಗೆ ಇದೊಂದು ಗ್ಯಾರೆಂಟಿ ಎಂದು ತಿಳಿದುಕೊಂಡು ಸರ್ಕಾರ ಬರ ಘೋಷಣೆಗೆ ಮುಂದಾಗಲಿ. ರಾಜ್ಯಸರ್ಕಾರ ಕೇಂದ್ರ, ಸರ್ಕಾರದ ಮೇಲೆ ಗೂಬೆ ತೋರಿಸುವುದು ಸರಿಯಲ್ಲ.

ಈ ಕುರಿತಾಗಿ ಮುಖ್ಯಮಂತ್ರಿ, ಉಪಮುಖ್ಯಮಂತ್ರಿ , ಕಂದಾಯ ಸಚಿವ ಹಾಗೂ ಮುಖ್ಯ ಕಾರ್ಯದರ್ಶಿಗಳಿಗೆ ಪತ್ರ ಬರೆದು ಕ್ಷೇತ್ರದ ವಾಸ್ತವ ಪರಿಸ್ಥಿತಿಯನ್ನು ಮತ್ತೊಮ್ಮೆ ಪರಿಶೀಲಿಸಿ ರೈತರಿಗೆ ನ್ಯಾಯ ಒದಗಿಸುವಂತೆ ಅವರು ಆಗ್ರಹಿಸಿದ್ದಾರೆ.

ರೈತರ ಕಣ್ಣೀರನ್ನು ಸರಕಾರ ನಿರ್ಲಕ್ಷಿಸಿದರೆ ಹೋರಾಟಕ್ಕೆ ಮುಂದಾಗಲಾಗುವುದು ಎಂದು ಶಾಸಕರು ಎಚ್ಚರಿಕೆ ನೀಡಿದ್ದಾರೆ. ಈ ಸಂದರ್ಭದಲ್ಲಿ ಮುಖಂಡರಾದ ಗುರುನಗೌಡ ಪಾಟೀಲ, ಸಚಿನಗೌಡ ಪಾಟೀಲ ಹಾಗೂ ಸಂಗನಗೌಡ ಪಾಟೀಲ ಮಾತನಾಡಿದರು.

# ಸ್ವದೇಶ ದರ್ಶನ್' ಯೋಜನೆಯಡಿ ಸಮಗ್ರ ಅಭಿವೃದ್ಧಿಗೆ ಪ್ರಸ್ತಾವನೆ:ಡಿಸಿ

• **ಉದಯವಾಹಿನಿ, ವಿಜಯಪುರ,:**

ಜಿಲ್ಲೆಯ ಐತಿಹಾಸಿಕ ಹಾಗೂ ಪ್ರವಾಸಿ ತಾಣಗಳನ್ನು ಪ್ರವಾಸಿಗರ ಆಕರ್ಷಣೆಯ ಕೇಂದ್ರಗಳನ್ನಾಗಿ ಅಭಿವೃದ್ಧಿ ಪಡಿಸಲು ಜಿಲ್ಲಾಡಳಿತ ಮುಂದಾಗಿದ್ದು, ಈ ನಿಟ್ಟಿನಲ್ಲಿ ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ವಿಶೇಷ ಸಮಿತಿಯ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿ ಡಾ. ಆನಂದ ಕೆ. ಅವರು ಕುಮಟಗಿ ಹಾಗೂ ಚಟ್ಟರಕಿ ಗ್ರಾಮದ ಐತಿಹಾಸಿಕ ತಾಣಗಳಿಗೆ ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಿದರು.

ಕುಮಟಗಿ ಗ್ರಾಮದ ಆದಿಲ್ ಶಾಹಿ ಕಾಲದ ಬೇಸಿಗೆ ಅರಮನೆಗೆ ಭೇಟಿ ನೀಡಿದ ಜಿಲ್ಲಾಧಿಕಾರಿಗಳು, ಅರಮನೆಯ ವಿಶಿಷ್ಟ ವೈಜ್ಞಾನಿಕ ನೀರು ಸರಬರಾಜು ವ್ಯವಸ್ಥೆ, ಅಪರೂಪದ ವರ್ಣಚಿತ್ರಗಳು ಪಕ್ಕದಲ್ಲಿರುವ ಐತಿಹಾಸಿಕ ಕೆರೆಯನ್ನು ವೀಕ್ಷಿಸಿದರು.

ಅಲ್ಲದೆ, ಕೇಂದ್ರ ಸರ್ಕಾರದ 'ಸ್ವದೇಶ ದರ್ಶನ್' ಯೋಜನೆಯಡಿ ಕುಮಟಗಿ ತಾಣದ ಸಮಗ್ರ ಅಭಿವೃದ್ಧಿಗೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಅವರು ಹೇಳಿದರು.


ಉದಯವಾಹಿನಿ ಚಿತ್ರ

ಸಿಂದಗಿ ತಾಲೂಕಿನ ಚಟ್ಟರಕಿ ಗ್ರಾಮದ 12ನೇ ಶತಮಾನದ ಸುಂದರ ಕಲ್ಲಿನ ಕೆತ್ತನೆಯ ಶ್ರೀ ದತ್ತಾತ್ರೇಯ ದೇವಾಲಯಕ್ಕೆ ಭೇಟಿ ನೀಡಿದ ಜಿಲ್ಲಾಧಿಕಾರಿಗಳು, ಅರ್ಚಕರು, ಗ್ರಾಮಸ್ಥರು ಹಾಗೂ ಸ್ಥಳೀಯ ಮುಖಂಡರೊಂದಿಗೆ ಚರ್ಚಿಸಿ ದೇವಾಲಯದ ಐತಿಹಾಸಿಕ ಹಿನ್ನೆಲೆ ಮತ್ತು ಅಭಿವೃದ್ಧಿ ಅಗತ್ಯಗಳ ಕುರಿತು ಮಾಹಿತಿ ಪಡೆದರು.

ಭಕ್ತರು ಹಾಗೂ ಪ್ರವಾಸಿಗರಿಗೆ ಅನುಕೂಲವಾಗುವಂತೆ ಸಮುದಾಯ ಶೌಚಾಲಯ, ಸಂಪರ್ಕ ರಸ್ತೆ, ವಿದ್ಯುತ್ ಹಾಗೂ ಕುಡಿಯುವ ನೀರು ಕಲ್ಪಿಸಲು ಗ್ರಾಮ ಪಂಚಾಯಿತಿ

> ಪ್ರವಾಸಿಗರಿಗೆ ಅಗತ್ಯ ಸೌಲಭ್ಯ ಕಲ್ಪಿಸುವ ಉದ್ದೇಶದಿಂದ ಜಿಲ್ಲಾ ಪಂಚಾಯಿತಿ ಅನುದಾನದಡಿ ಶೌಚಾಲಯ, ಕುಡಿಯುವ ನೀರು ಹಾಗೂ ವಿದ್ಯುತ್ ಸಂಪರ್ಕ ಸೇರಿದಂತೆ ಮೂಲಸೌಕರ್ಯಗಳನ್ನು ತಕ್ಷಣ ಒದಗಿಸಲಾಗುವುದು ಎಂದು ತಿಳಿಸಿದರು.
> -ಡಾ. ಆನಂದ ಕೆ.

ಪಿಡಿಒ ಅವರಿಗೆ ಜಿಲ್ಲಾಧಿಕಾರಿಗಳು ತಕ್ಷಣದ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆ (ಎಎಸ್ಐ) ಹಾಗೂ ಪ್ರವಾಸೋದ್ಯಮ ಇಲಾಖೆಯ ಸಮನ್ವಯದೊಂದಿಗೆ ಚಟ್ಟರಕಿ ದತ್ತಾತ್ರೇಯ ದೇವಾಲಯ ಕ್ಷೇತ್ರವನ್ನೂ 'ಸ್ವದೇಶ ದರ್ಶನ್' ಯೋಜನೆಯಡಿ ಸಮಗ್ರವಾಗಿ ಅಭಿವೃದ್ಧಿಪಡಿಸಲಾಗುವುದು ಎಂದು ಜಿಲ್ಲಾಧಿಕಾರಿಗಳು ಭರವಸೆ ನೀಡಿದರು.

# ನಂಜನಗೂಡು ಮಠದಲ್ಲಿ ಪಂಚರಾತ್ರೋತ್ಸವಕ್ಕೆ ಚಾಲನೆ

• **ಉದಯವಾಹಿನಿ ವಿಜಯಪುರ, :**

ಕಲಿಯುಗದ ಕಾಮಧೇನು, ಕಲ್ಪವೃಕ್ಷ ಎಂದೇ ಖ್ಯಾತರಾದ ಶ್ರೀ ರಾಘವೇಂದ್ರ ಗುರು ಸಾರ್ವಭೌಮರ 355ನೇ ಆರಾಧನಾ ಮಹೋತ್ಸವದ ಅಂಗವಾಗಿ ಪಂಚರಾತ್ರೋತ್ಸವವು ಇಲ್ಲಿನ ನಂಜನಗೂಡು ಶ್ರೀ ರಾಘವೇಂದ್ರಸ್ವಾಮಿ ಮಠದಲ್ಲಿ ಭಕ್ತಿಭಾವದಿಂದ ಆರಂಭಗೊಂಡಿತು. ಶ್ರೀಮಠದ ಪೀಠಾಧಿಪತಿ ಶ್ರೀ ಸುಬುಧೇಂದ್ರತೀರ್ಥರ ಆಜ್ಞಾನುಸಾರ ನಡೆದ ಪಂಚರಾತ್ರೋತ್ಸವದ ಅಂಗವಾಗಿ ಬೆಳಿಗ್ಗೆ ಸಾಮೂಹಿಕ ಶ್ರೀ ಸತ್ಯನಾರಾಯಣ ಪೂಜೆ ನೆರವೇರಿತು. ಸಂಜೆ ಧರ್ಮಧ್ವಜಾರೋಹಣ, ಗೋಪೂಜೆ, ಲಕ್ಷ್ಮೀ ಪೂಜೆ, ಪ್ರಾರ್ಥನೋತ್ಸವ, ಶಾಖೋತ್ಸವ, ಧಾನ್ಯ ಪೂಜೆ, ಶ್ರೇಯ ಪ್ರಾರ್ಥನೆ ಹಾಗೂ ಮಹಾಮಂಗಳಾರತಿ ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಜರುಗಿದವು. ಶ್ರೀಮಠದ ವಿಚಾರಣಾಕರ್ತ ಗೋಪಾಲ ನಾಯಕ ಅವರ ನೇತೃತ್ವದಲ್ಲಿ ವ್ಯವಸ್ಥಾಪಕ ರವಿ ಆಚಾರ್ಯ, ಅರ್ಚಕರಾದ ಶ್ರೀಧರಾಚಾರ್ಯ ಹಾಗೂ ದಾಮೋದರಾಚಾರ್ಯ ಅವರು ಧಾರ್ಮಿಕ ವಿಧಿವಿಧಾನಗಳನ್ನು ನೆರವೇರಿಸಿದರು. ಆರಾಧನೋತ್ಸವದ ಪ್ರಯುಕ್ತ ದವಸ-ಧಾನ್ಯ, ನಗದು ಹಾಗೂ ಫಲಪುಷ್ಪಗಳನ್ನು ದೇಣಿಗೆಯಾಗಿ ನೀಡಿದ ದಾನಿಗಳನ್ನು ಶ್ರೀಮಠದ ವತಿಯಿಂದ ಶೇಷವಸ್ತ್ರ ನೀಡಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಮಧ್ವೇಶಾಚಾರ್ಯ ಜೋಶಿ (ಮುತ್ತಗಿ), ಅಶೋಕ ತಾವರಗೇರಿ, ಜಿ.ಎಸ್. ಕುಲಕರ್ಣಿ, ವಿ.ಬಿ. ಕುಲಕರ್ಣಿ, ಕಿರಣ ಕುಲಕರ್ಣಿ, ಭೀಮಣ್ಣ ಕುಲಕರ್ಣಿ, ಅರುಣ ತೊರವಿ, ಸಂತೋಷ ಕುಲಕರ್ಣಿ, ಡಾ. ಪ್ರಾಣೇಶ ಜಹಾಗೀರದಾರ ಸೇರಿದಂತೆ ಭಕ್ತರು ಹಾಗೂ ಗಣ್ಯರು ಉಪಸ್ಥಿತರಿದ್ದರು.

# 21 ವರ್ಷದೊಳಗಿನವರಿಗೆ ಸಿಗರೇಟ್ ಮಾರುವಂತಿಲ್ಲ: ನಿರಂತರ ತಪಾಸಣೆಗೆ ಎಡಿಸಿ ಸೂಚನೆ

• **ಉದಯವಾಹಿನಿ, ಮಂಗಳೂರು**

21 ವರ್ಷದ ಒಳಗಿನ ವ್ಯಕ್ತಿಗಳಿಗೆ ಸಿಗರೇಟ್ ಸೇರಿದಂತೆ ಯಾವುದೇ ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡುವಂತಿಲ್ಲ ಎಂದು ಅಪರ ಜಿಲ್ಲಾಧಿಕಾರಿ ರಾಜು ಕೆ. ತಿಳಿಸಿದ್ದಾರೆ.ಅವರು ಶುಕ್ರವಾರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ದಕ್ಷಿಣ ಕನ್ನಡ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಸಿಗರೇಟ್ ಮತ್ತು ಇತರೆ ತಂಬಾಕು ಉತ್ಪನ್ನಗಳ ಕಾಯಿದೆ 2024ಕ್ಕೆ ತಂದಿರುವ ತಿದ್ದುಪಡಿ ಅನ್ವಯ 21 ವರ್ಷದೊಳಗಿನ ಯಾವುದೇ ವ್ಯಕ್ತಿಗಳಿಗೆ ಸಿಗರೇಟ್ ಅಥವಾ ತಂಬಾಕು ಉತ್ಪನ್ನಗಳನ್ನು ಮಾರುವುದನ್ನು ನಿಷೇಧಿಸಲಾಗಿದೆ. ಇದಲ್ಲದೆ, ಸಿಗರೇಟ್ ಚಿಲ್ಲರೆಯಾಗಿ ಮಾರುವುದನ್ನೂ ಹಾಗೂ ಶಾಲಾ-ಕಾಲೇಜುಗಳ 100 ಮೀಟರ್ ಅಂತರದಲ್ಲಿ ಇವುಗಳ ಮಾರಾಟ ನಿಷೇಧಿಸಲಾಗಿದೆ. ಅಂಗಡಿಗಳಲ್ಲಿ ಇವುಗಳನ್ನು ಮಾರಾಟ ಮಾಡುವವರಿಗೂ 21 ವರ್ಷ ಆಗಿರಬೇಕು ಎಂದು ಅವರು ತಿಳಿಸಿದರು.

ಈ ಕಾಯಿದೆಯನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಎಲ್ಲ ನಗರ ಸ್ಥಳೀಯ ಸಂಸ್ಥೆ, ಗ್ರಾಮ ಪಂಚಾಯತ್‌ಗಳು ಅಂಗಡಿ, ಹೋಟೆಲ್, ಕೆಫೆಗಳಲ್ಲಿ ನಿರಂತರ ತಪಾಸಣೆ ನಡೆಸಬೇಕು. ಅಪ್ರಾಪ್ತರಿಗೆ ಸಿಗರೇಟ್ ಮಾರಾಟ ಕಂಡುಬಂದರೆ, ಅವುಗಳ ಲೈಸನ್ಸ್ ರದ್ದು ಮಾಡಬೇಕು. ಜಿಲ್ಲಾ ತಂಬಾಕು ನಿಯಂತ್ರಣ


ಉದಯವಾಹಿನಿ ಚಿತ್ರ

> ಸಿಗರೇಟ್ ಸೇದುವವರಿಗೆ ಅನುಕೂಲವಾಗಲು ಲೈಟರ್ ಅಥವಾ ಬೆಂಕಿಪೆಟ್ಟಿಗೆ ಇಡುವವರ ವಿರುದ್ಧವೂ ಕ್ರಮ ಕೈಗೊಳ್ಳಬೇಕು. ಸಾರ್ವಜನಿಕ ಸ್ಥಳಗಳಲ್ಲಿ ಸಿಗರೇಟ್ ಎಳೆಯುವುದು, ತಂಬಾಕು ತಿಂದು ಉಗಿಯುವುದು ಕಂಡುಬಂದರೆ ಅವರಿಗೆ ನಿಯಮಾನುಸಾರ ರೂ.1000 ದಂಡ ವಿಧಿಸಿ, ಎಚ್ಚರಿಕೆ ನೀಡಬೇಕು.

ಕೋಶ, ಆರೋಗ್ಯ ಇಲಾಖೆ, ನಗರ ಸ್ಥಳೀಯ ಸಂಸ್ಥೆ/ಗ್ರಾಮ ಪಂಚಾಯತ್ ಮತ್ತು ಪೊಲೀಸರೊಂದಿಗೆ ಜಂಟಿ ಕಾರ್ಯಾಚರಣೆ ನಡೆಸಲು ಅವರು ಕಟ್ಟುನಿಟ್ಟಿನ ಸೂಚನೆ ನೀಡಿದರು.ಸಿಗರೇಟ್‌ಗಳನ್ನು ಇಡೀ ಪ್ಯಾಕ್‌ನಲ್ಲಿ ಮಾರಾಟ ಮಾಡಬೇಕು. ಪ್ಯಾಕ್ ತೆರೆದು ಸಿಂಗಲ್ ಆಗಿ ಸಿಗರೇಟ್ ಮಾರಲು ಕಾನೂನಿನಲ್ಲಿ ಅವಕಾಶ ಇಲ್ಲ.

# ತಂದೆ ಕಳೆದುಕೊಂಡ ಕುಟುಂಬಕ್ಕೆ ಇದೇನಾ ಸಿಗಬೇಕಾದ ನ್ಯಾಯ?; ಮೃತ ಚಂದ್ರಶೇಖರ್ ಪತ್ನಿ

• **ಉದಯವಾಹಿನಿ ಶಿವಮೊಗ್ಗ:**

ನನ್ನ ಮಗನಿಗೆ ಒಳ್ಳೆಯ ಕೆಲಸ ಸಿಗಬಹುದು, ನಮ್ಮ ಕುಟುಂಬಕ್ಕೆ ಒಂದು ಆಸರೆ ಸಿಗಬಹುದು ಎಂಬ ನಿರೀಕ್ಷೆಯಲ್ಲಿದ್ದೆವು. ಆದರೆ ಮಗನಿಗೆ ವಾಚ್‌ಮನ್ ಕೆಲಸ ನೀಡಲಾಗಿದೆ. ಒಬ್ಬ ತಂದೆಯನ್ನು ಕಳೆದುಕೊಂಡ ಕುಟುಂಬಕ್ಕೆ ಇದೇನಾ ಸಿಗಬೇಕಾದ ನ್ಯಾಯ? ಎಂದು ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧಿಕಾರಿ ದಿವಂಗತ ಚಂದ್ರಶೇಖರ್ ಅವರ ಪತ್ನಿ ಕವಿತಾ ಕಣ್ಣೀರಿನಿಂದ ನೋವು ತೋಡಿಕೊಂಡಿದ್ದಾರೆ.

ಶಿವಮೊಗ್ಗದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾಗೇಂದ್ರ ಅವರ ರಾಜೀನಾಮೆ ಬಗ್ಗೆ ನಾನೇನು ಹೆಚ್ಚಿಗೆ ಹೇಳುವುದಿಲ್ಲ. ಆದರೆ ನನ್ನ ಪತಿ ಮೃತಪಟ್ಟ ಬಳಿಕ ನಮ್ಮ ಕುಟುಂಬಕ್ಕೆ ಸಿಗಬೇಕಾಗಿದ್ದ ಕಾನೂನುಬದ್ಧ ಪರಿಹಾರಕ್ಕಾಗಿ ನಾವು ಇನ್ನೂ ಅಲೆದಾಡುತ್ತಿದ್ದೇವೆ. ಬೆಂಗಳೂರಿಗೆ ಎಷ್ಟೋ ಬಾರಿ ಹೋಗಿ ಬಂದಿದ್ದೇವೆ. ಅಧಿಕಾರಿಗಳ ಕಚೇರಿಗಳ ಬಾಗಿಲು ತಟ್ಟಿದ್ದೇವೆ. ಆದರೂ ನಮ್ಮ ನೋವನ್ನು ಕೇಳುವವರು ಯಾರೂ ಇಲ್ಲ ಎಂದು ಅಳಲು ತೋಡಿಕೊಂಡರು.

ಇಂದು ಸಚಿವರಾಗುತ್ತಾರೆ, ನಾಳೆ ರಾಜೀನಾಮೆ ಕೊಡುತ್ತಾರೆ. ಮತ್ತೆ ಅಧಿಕಾರಕ್ಕೆ ಬರುತ್ತಾರೆ. ಬಿ.ನಾಗೇಂದ್ರ ಅವರು ಮತ್ತೊಮ್ಮೆ ಸಚಿವರಾದಾಗಲಾದರೂ ನಮಗೆ ನ್ಯಾಯ ಸಿಗಬಹುದು ಎಂಬ ಸಣ್ಣ ನಿರೀಕ್ಷೆ ಇತ್ತು.

ಆದರೆ ಆ ನಿರೀಕ್ಷೆಯೂ ಹುಸಿಯಾಗಿದೆ, ಅವರ ರಾಜೀನಾಮೆ


ಉದಯವಾಹಿನಿ ಚಿತ್ರ

> ಚಂದ್ರಶೇಖರ್ ಅವರ ಪಿಎಫ್ ಹಣ, ಗ್ರ್ಯಾಚುಟಿ ಸೇರಿದಂತೆ ಕುಟುಂಬಕ್ಕೆ ಬರಬೇಕಾದ ಹಲವು ಮೊತ್ತಗಳು ಇನ್ನೂ ಬಂದಿಲ್ಲ. ಪತಿಯ ಅಗಲಿಕೆಯ ಬಳಿಕ ಕುಟುಂಬದ ಜವಾಬ್ದಾರಿ ಸಂಪೂರ್ಣವಾಗಿ ತಮ್ಮ ಹೆಗಲ ಮೇಲೆ ಬಿದ್ದಿದ್ದು, ಮಕ್ಕಳ ಭವಿಷ್ಯದ ಬಗ್ಗೆಯೂ ಆತಂಕ ಎದುರಾಗಿದೆ ಎಂದು ಹೇಳಿದರು. -ಕವಿತಾ

ನಮಗೆ ಸಮಾಧಾನವನ್ನೂ ತಂದಿಲ್ಲ, ಸಂತೋಷವನ್ನೂ ತಂದಿಲ್ಲ. ಏಕೆಂದರೆ ನಮಗೆ ಬೇಕಾಗಿರುವುದು ರಾಜಕೀಯವಲ್ಲ, ನಮ್ಮ ಕುಟುಂಬಕ್ಕೆ ಸಿಗಬೇಕಾದ ನ್ಯಾಯ ಮತ್ತು ಪರಿಹಾರ ಎಂದು ಕವಿತಾ ಹೇಳಿದರು.

# ಶ್ರೀ ನಾರಾಯಣಗುರುಗಳ ಕೊಡುಗೆ ಸ್ಮರಣೀಯ

## ಸಮಾಜವೇ ಜಾತಿಯನ್ನು ಸೃಷ್ಟಿಸುತ್ತದೆ. ಎಲ್ಲರ ರಕ್ತದ ಬಣ್ಣ ಒಂದೇ' ಎಂಬ ನಾರಾಯಣಗುರುಗಳ ಚಿಂತನೆ ಇಂದಿಗೂ ಸಮಾಜಕ್ಕೆ ದಾರಿದೀಪವಾಗಿದೆ

• **ಉದಯವಾಹಿನಿ ಗದಗ,:**

ಸಮಾಜದಲ್ಲಿ ಸಮಾನತೆ, ಸಹೋದರತೆ ಹಾಗೂ ಸಾಮಾಜಿಕ ನ್ಯಾಯದ ಸಂದೇಶ ಸಾರಿದ ಬ್ರಹ್ಮಶ್ರೀ ನಾರಾಯಣಗುರುಗಳ ಆದರ್ಶಗಳು ಇಂದಿಗೂ ಪ್ರಸ್ತುತವಾಗಿವೆ. ಜಾತಿ, ಧರ್ಮದ ಭೇದವಿಲ್ಲದೆ ಎಲ್ಲರೂ ಸಮಾನರು ಎಂಬ ಸಂದೇಶವನ್ನು ಅವರು ಸಮಾಜಕ್ಕೆ ನೀಡಿದರು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಹೇಳಿದರು.ನಗರದ ಜಿಲ್ಲಾಡಳಿತ,

**1 : ಯಾರಿಗೂ ಜಾತಿ ಇರುವುದಿಲ್ಲ**
**2 : ಹುಟ್ಟುವಾಗ ಶುದ್ಧವಾಗಿರುತ್ತದೆ**
**3 : ಸಮಾಜದ ಕಟ್ಟುಪಾಡುಗಳಿವೆ**

ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಜಿಲ್ಲಾಡಳಿತ ಭವನದ ಆಡಿಟೋರಿಯಂ ಸಭಾಂಗಣದಲ್ಲಿ ಆಯೋಜಿಸಿದ್ದ ಬ್ರಹ್ಮಶ್ರೀ ನಾರಾಯಣಗುರು ಜಯಂತಿ2026 ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಬ್ರಿಟಿಷರ ಆಡಳಿತದ ಸಂದರ್ಭದಲ್ಲಿ ಕೇರಳ ಹಾಗೂ ದಕ್ಷಿಣ ಕನ್ನಡ ಭಾಗಗಳಲ್ಲಿ ತೀವ್ರವಾಗಿದ್ದ ಅಸ್ಪೃಶ್ಯತೆ, ಮೇಲು-ಕೀಳು ಹಾಗೂ ಜಾತಿ ತಾರತಮ್ಯದ ವಿರುದ್ಧ ನಾರಾಯಣಗುರುಗಳು ಹೋರಾಟ ನಡೆಸಿದರು. ಶೂದ್ರ ಸಮುದಾಯದಲ್ಲಿ ಜನಿಸಿದರೂ ಉನ್ನತ ಶಿಕ್ಷಣ ಪಡೆದು, ಸಮಾಜದ ಕಟ್ಟುಪಾಡುಗಳನ್ನು ಧಿಕ್ಕರಿಸಿ ಕೆಳವರ್ಗದ ಜನರಿಗೂ ಧಾರ್ಮಿಕ ಹಕ್ಕು ದೊರೆಯುವಂತೆ ದೇವಾಲಯಗಳನ್ನು



ನಿರ್ಮಿಸುವ ಮೂಲಕ ಸಮಾನತೆಯ ಸಂದೇಶ ಸಾರಿದರು ಎಂದರು. ಆನ್‌ಲೈನ್‌ಅನುವಾದ ಪರಿಕರಗಳನ್ನು ಬಳಸುವುದು ಹುಟ್ಟುವಾಗ ಯಾರಿಗೂ ಜಾತಿ ಇರುವುದಿಲ್ಲ ಸಮಾಜವೇ ಜಾತಿಯನ್ನು ಸೃಷ್ಟಿಸುತ್ತದೆ. ಎಲ್ಲರ ರಕ್ತದ ಬಣ್ಣ ಒಂದೇ' ಎಂಬ ನಾರಾಯಣಗುರುಗಳ ಚಿಂತನೆ ಇಂದಿಗೂ ಸಮಾಜಕ್ಕೆ ದಾರಿದೀಪವಾಗಿದೆ. ಮಗುವಿನ ಮನಸ್ಸು ಹುಟ್ಟುವಾಗ ಶುದ್ಧವಾಗಿರುತ್ತದೆ. ಆದರೆ ಬೆಳೆಯುತ್ತಾ ಸಮಾಜದ ಕಟ್ಟುಪಾಡುಗಳಿಗೆ ಸಿಲುಕುತ್ತದೆ.

ಇಂತಹ ಅಸಮಾನತೆಯಿಂದ ಹೊರಬಂದು ಮನುಷ್ಯತ್ವದಿಂದ ಬದುಕಲು ಮಹಾನ್ ದಾರ್ಶನಿಕರ ಚಿಂತನೆಗಳು ಪ್ರೇರಣೆ ನೀಡುತ್ತವೆ ಎಂದು ಹೇಳಿದರು. ನಾರಾಯಣಗುರುಗಳ ಜಯಂತಿ ಆಚರಣೆ ಕೇವಲ ಒಂದು ಕಾರ್ಯಕ್ರಮಕ್ಕೆ ಸೀಮಿತವಾಗದೆ, ಅವರ ಸಮಾನತೆ ಮಾನವೀಯತೆಯ ಸಂದೇಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಲು ಪ್ರೇರಣೆಯಾಗಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

> ಅಸ್ಪೃಶ್ಯರಿಗೆ ಸಾರ್ವಜನಿಕ ರಸ್ತೆಯಲ್ಲಿ ಸಂಚರಿಸಲು ಹಾಗೂ ದೇವಸ್ಥಾನ ಪ್ರವೇಶಿಸಲು ಅವಕಾಶವಿಲ್ಲದ ಕಾಲದಲ್ಲಿ ನಡೆದ ವೈಕಂ ಸತ್ಯಾಗ್ರಹ ಸೇರಿದಂತೆ ಸಾಮಾಜಿಕ ಸಮಾನತೆಗಾಗಿ ನಡೆದ ಹೋರಾಟಗಳಿಗೆ ನಾರಾಯಣಗುರುಗಳು ಬೆಂಬಲ ನೀಡಿದ್ದರು. ದಲಿತರು ಹಾಗೂ ಹಿಂದುಳಿದ ವರ್ಗದವರಿಗೆ ಸಮಾನ ಹಕ್ಕುಗಳನ್ನು ದೊರಕಿಸಿಕೊಡುವಲ್ಲಿ ಅವರ ಕೊಡುಗೆ ಮಹತ್ವದ್ದಾಗಿದೆ ಎಂದು ನೀಡಿದರು.- ಡಾ. ದತ್ತಪ್ರಸನ್ನ ಪಾಟೀಲ

ಉಪನ್ಯಾಸಕ ಡಾ. ದತ್ತಪ್ರಸನ್ನ ಪಾಟೀಲ ಮಾತನಾಡಿ, ಅಸ್ಪೃಶ್ಯತೆ ಹಾಗೂ ಸಾಮಾಜಿಕ ತಾರತಮ್ಯದ ವಿರುದ್ಧ ಅಹಿಂಸಾತ್ಮಕ ಹೋರಾಟ ನಡೆಸಿದ ನಾರಾಯಣಗುರುಗಳು ಸಾಮಾಜಿಕ ಮತ್ತು ಶೈಕ್ಷಣಿಕ ಕ್ರಾಂತಿಗೆ ಮುನ್ನುಡಿ ಬರೆದರು. ಒಂದೇ ಜಾತಿ, ಒಂದೇ ಧರ್ಮ, ಒಂದೇ ದೇವರು' ಎಂಬ ಅವರ ಧ್ಯೇಯವಾಕ್ಯ ಸಾರ್ವಕಾಲಿಕ ಪ್ರಸ್ತುತವಾಗಿದೆ ಎಂದರು.

> ತಳ ಸಮುದಾಯದವರು ಶೈಕ್ಷಣಿಕವಾಗಿ ಮುಂದೆ ಬರಬೇಕು ಎಂಬ ಉದ್ದೇಶದಿಂದ ಶ್ರೀ ನಾರಾಯಣ ಗುರು ಧರ್ಮ ಪರಿಪಾಲನಾ ಯೋಗಂ ಸಂಸ್ಥೆ ಸ್ಥಾಪಿಸಿ, ಶಾಲಾ-ಕಾಲೇಜುಗಳ ನಿರ್ಮಾಣಕ್ಕೆ ಉತ್ತೇಜನ ನೀಡಿದರು. ಬಾಲ್ಯ ವಿವಾಹ ಹಾಗೂ ಮಹಿಳೆಯರ ಮೇಲಿನ ದೌರ್ಜನ್ಯಗಳನ್ನು ವಿರೋಧಿಸಿ, ಸರಳ ವಿವಾಹಕ್ಕೆ ಒತ್ತು ನೀಡುವಂತೆ ಸಮಾಜಕ್ಕೆ ಕರೆ ನೀಡಿದ್ದರು ಎಂದರು.

ಕೇರಳದ ಅರುವಿಪುರಂನಲ್ಲಿ ನೆಯ್ಯಾರ್ ನದಿಯಿಂದ ಶಿಲೆ ತಂದು ಶಿವಲಿಂಗ ಪ್ರತಿಷ್ಠಾಪಿಸುವ ಮೂಲಕ ಧಾರ್ಮಿಕ ಆಚರಣೆಗಳ ಮೇಲಿನ ಕೆಲವರ ಏಕಸ್ವಾಮ್ಯವನ್ನು ಪ್ರಶ್ನಿಸಿ, ಕೆಳಸಮುದಾಯದವರಿಗೂ ಪೂಜಾ ಹಕ್ಕು ದೊರೆಯುವಂತೆ ಮಾಡಿದರು.

ದೇವಸ್ಥಾನಗಳಲ್ಲಿ ಕನ್ನಡಿಗಳನ್ನು ಪ್ರತಿಷ್ಠಾಪಿಸುವ ಮೂಲಕ ದೇವರು ಪ್ರತಿಯೊಬ್ಬರಲ್ಲಿಯೂ ಇದ್ದಾನೆ ಎಂಬ ಅದ್ವೈತ ತತ್ವವನ್ನು ಜನಸಾಮಾನ್ಯರಿಗೆ ಪರಿಚಯಿಸಿದರು ಎಂದು ವಿವರಿಸಿದರು.

ಕಾರ್ಯಕ್ರಮದಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಗಳಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳು ಮತ್ತು ಕ್ರೀಡಾಕೂಟಗಳಲ್ಲಿ ವಿಜೇತರಾದ ಕ್ರೀಡಾಪಟುಗಳನ್ನು ಸನ್ಮಾನಿಸಲಾಯಿತು., ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಸವರಾಜ ವಿ. ಬಳ್ಳಾರಿ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಡಾ.ನಂದ ಹಣ್ಣಬರಟ್ಟಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಮಾಜದ ಮುಖಂಡರು ಉಪಸ್ಥಿತರಿದ್ದರು.



**ಮಿನಿ ನ್ಯೂಸ್**

# ಜ್ಞಾನಪೀಠ ಪ್ರಶಸ್ತಿ ಪುರಸ್ಕೃತ ವಿ.ಕೃ. ಗೋಕಾಕರ ಕುರಿತು ಉಪನ್ಯಾಸ

• **ಉದಯವಾಹಿನಿ ಜೇವರ್ಗಿ :**

ಕನ್ನಡದ ಮಹತ್ವದ ಲೇಖಕರಲ್ಲಿ ವಿ. ಕೃ ಗೋಕಾಕರ ಹೆಸರು ಚಿರಸ್ಮರಣೀಯವಾಗಿದೆ. ಕನ್ನಡ ಸಾರಸ್ವತ ಲೋಕ ವನ್ನು ಶ್ರೀಮಂತ ಗೊಳಿಸಿದ್ದಾರೆ.

ಅವರ ಕುರಿತು ವಿಸ್ತೃತ ಚಿಂತನ ಮಂಥನ ನಡೆಯ ಬೇಕಾಗಿದೆ ಎಂದು ಗೊಟಗೋಡಿಯ ಕರ್ನಾಟಕ ಜಾನಪದ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿ ಹಾಗೂ ದತ್ತಿ ದಾಸೋಹಿ ಡಾ. ಟಿ. ಎಂ ಭಾಸ್ಕರ್ ಅಭಿಪ್ರಾಯ ಪಟ್ಟರು. ಅವರು ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಕಲಬುರಗಿಯ ಕನ್ನಡ ನಾಡು ಲೇಖಕರ ಹಾಗೂ ಓದುಗರ ಸಹಕಾರ ಸಂಘ ಮತ್ತು ಜೇವರ್ಗಿ ಪ್ರಥಮ ದರ್ಜೆ ಕಾಲೇಜಿನ ಕನ್ನಡ ವಿಭಾಗದ ಸಹಯೋಗದಲ್ಲಿ ಜ್ಞಾನಪೀಠ ಪ್ರಶಸ್ತಿ ಪುರಸ್ಕೃತ ವಿ.ಕೃ. ಗೋಕಾಕರ ಕುರಿತು ಆಯೋಜಿಸಿದ್ದ ದತ್ತಿ ಉಪನ್ಯಾಸಕದಲ್ಲಿ ಮಾತನಾಡಿದರು.

ವಿ. ಕೃ. ಗೋಕಾಕರ ಬಗ್ಗೆ ವಿಶೇಷ ಉಪನ್ಯಾಸ ನೀಡಿದ ವಿಶ್ರಾಂತ ಪ್ರಾಧ್ಯಾಪಕ ಡಾ. ಶ್ರೀಶೈಲ ನಾಗರಾಳ ಮಾತನಾಡಿ, ಗೋಕಾಕರು ತಮ್ಮ ಕಾವ್ಯಯಾನ ಪ್ರಾರಂಭಿ ಸಿದ್ದು ನವೋದಯದಿಂದ ಆದರೂ ಅವರು ನವ್ಯದ ಹೊಸ ಮಾರ್ಗವನ್ನು ಹುಟ್ಟು ಹಾಕಿದರು ಎಂದು ಹೇಳಿದರು. ಕಾಲೇಜಿನ ಪ್ರಾಂಶುಪಾಲ ರಾದ ಪೂರ. ಶಾಂತಾ ಬಿ.ಅಸ್ಟಿಗೆ ಕಾರ್ಯಕ್ರಮ ಉದ್ಘಾಟಿಸಿದರು. ಕನ್ನಡ ನಾಡು ಲೇಖಕರ ಹಾಗೂ ಓದುಗರ ಸಹಕಾರ ಸಂಘದ ಅಧ್ಯಕ್ಷರಾದ ಅಪ್ಪಾರಾವ್ ಅಕ್ಕೋಣಿ ಅಧ್ಯಕ್ಷತೆ ವಹಿಸಿದ್ದರು.

# ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯಗಳ ಆಹಾರ ಇತರೆ ಸಾಮಗ್ರಿಗಳ ಪೂರೈಕೆಯಲ್ಲಿ ಅಕ್ರಮ

• **ಉದಯವಾಹಿನಿ ಕಲಬುರಗಿ:**

ಜಿಲ್ಲೆಯ ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯಗಳಿಗೆ ಆಹಾರ ಮತ್ತು ಇತರೆ ಸಾಮಗ್ರಿಗಳನ್ನು ಸರಬರಾಜು ಮಾಡುವ ಟೆಂಡರ್ ಸಂಬಂಧಿಸಿದಂತೆ, ಟೆಂಡರ್ ಷರತ್ತುಗಳ ಉಲ್ಲಂಘನೆ ಮಾಡಿರುತ್ತಾರೆ.

ಈ ಅಕ್ರಮ ವ್ಯವಹಾರದ ಕುರಿತು ಕ್ರಮ ಜರುಗಿಸದೆ ಅಧಿಕಾರದ ದುರುಪಯೋಗ ಮಾಡಿಕೊಂಡಿರುವ ಕಲಬುರಗಿ ಉಪ ನಿರ್ದೇಶಕರು ಆಹಾರ ಸರಬರಾಜು ಗುತ್ತಿಗೆದಾರರ ಜೊತೆಗೆ ಶಾಮೀಲಾಗಿ ಅವ್ಯವಹಾರ ಮಾಡುತ್ತಿರುವುದು ಮೇಲ್ನೋಟಕ್ಕೆ ಕಂಡುಬರುತ್ತಿದೆ ಎಂದು ಜೈಕನ್ನಡಿಗರ ಸೇನೆ ಸಂಸ್ಥಾಪಕ ಅಧ್ಯಕ್ಷ ಡಾ.ದತ್ತು ಎಚ್.ಭಾಸಗಿ ಅವರು ಇಲಾಖೆಯ ಜಿಲ್ಲಾ ವ್ಯವಸ್ಥಾಪಕರಿಗೆ ಸಲ್ಲಿಸಿರುವ ದೂರಿನಲ್ಲಿ ತಿಳಿಸಿದ್ದಾರೆ.

ಸರ್ಕಾರದ ನಿಯಮಗಳ ಪ್ರಕಾರ ಟೆಂಡರದಾರರು ಯಾವುದೇ ವಸತಿನಿಲಯಗಳಿಗೆ ಆಹಾರ ಪದಾರ್ಥಗಳನ್ನು ಪ್ರತಿ ತಿಂಗಳು 2ನೇ ತಾರಿಕು ಒಳಗಾಗಿ ನಿಲಯಗಳಿಗೆ ಸರಬರಾಜು ಮಾಡಬೇಕು ಆದರೆ ಸರಿಯಾಗಿ ಆಹಾರ ಪದಾರ್ಥಗಳನ್ನು ಸರಬರಾಜು ಮಾಡದೆ ಪ್ರತಿ ತಿಂಗಳು ಬೋಗಸ್ ಬಿಲ್ ಮಾಡಿಕೊಂಡು ಸರಕಾರಕ್ಕೆ ಮತ್ತು ವಿದ್ಯಾರ್ಥಿಗಳಿಗೆ ಭಾರಿ ಅನ್ಯಾಯ ಮಾಡುತ್ತಿದ್ದಾರೆ. ಇಲ್ಲಿನ ಅಧಿಕಾರಿಯನ್ನು ಕೆಲಸದಿಂದ ವಜಾ ಮಾಡಿ ಇವರ ಮೇಲೆ ಕಾನೂನು ಕ್ರಮಕೈಗೊಂಡು ಉನ್ನತ ಮಟ್ಟದ ತನಿಖೆ ಮಾಡಲು ಆಗ್ರಹಿಸಲಾಗಿದೆ.

# ಆಧುನಿಕತೆಯೊಂದಿಗೆ ಕಲೆ, ಪರಂಪರೆಯ ಸಂರಕ್ಷಣೆ ಅಗತ್ಯ

• **ಉದಯವಾಹಿನಿ ಕಲಬುರಗಿ,**

ಕಲೆ ಮತ್ತು ವಾಸ್ತುಶಿಲ್ಪವು ಪರಸ್ಪರ ಅವಿನಾಭಾವ ಸಂಬಂಧ ಹೊಂದಿದ್ದು, ನಮ್ಮ ನಾಡಿನ ಸಂಸ್ಕೃತಿ, ಪರಂಪರೆ ಮತ್ತು ಇತಿಹಾಸವನ್ನು ಪ್ರತಿಬಿಂಬಿಸುವ ಪ್ರಮುಖ ಮಾಧ್ಯಮಗಳಾಗಿವೆ.

ಇಂದಿನ ಆಧುನಿಕ ಯುಗದಲ್ಲಿ ಕಲೆಯ ಮಹತ್ವನ್ನು ಅರಿತು ಕಲಾವಿದರಿಗೆ ಸೂಕ್ತ ಪ್ರೋತ್ಸಾಹ ಮತ್ತು ಅವಕಾಶಗಳನ್ನು ಒದಗಿಸುವುದು ಅತ್ಯಂತ ಅಗತ್ಯವಾಗಿದೆ ಎಂದು ಭಾರತ ಭೂಷಣ್, ನಾಡೋಜ ಡಾ.ಜೆ.ಎಸ್.ಖಂಡೇರಾವ ಹೇಳಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಧನ ಸಹಾಯದ ವತಿಯಿಂದ ನಗರದ ದಿ ಆರ್ಟ್ ಇಂಟಿಗ್ರೇಶನ್ ಚಿತ್ರಕಲಾ ಮಹಾವಿದ್ಯಾಲಯದಲ್ಲಿ ಆ.27 ರಿಂದ 29 ರವರೆಗೆ ಆಯೋಜಿಸಿರುವ ವಿಶ್ವನಾಥ ತಂಬಾಕೆಯವರ ಚಿತ್ರಕಲಾ ಪ್ರದರ್ಶನವನ್ನು ಉದ್ಘಾಟಿಸಿ ಮಾತನಾಡಿದ ಅವರು, ಕಲಾವಿದರ ಪ್ರತಿಭೆಯನ್ನು ಗುರುತಿಸಿ ಅದನ್ನು ಬೆಳೆಸಲು ವಿವಿಧ ವೇದಿಕೆಗಳನ್ನು ಕಲ್ಪಿಸಬೇಕು. ಇಂತಹ ಕಲಾ ಪ್ರದರ್ಶನಗಳು ಯುವ ಕಲಾವಿದರಿಗೆ ತಮ್ಮ ಪ್ರತಿಭೆಯನ್ನು ಪರಿಚಯಿಸಿಕೊಳ್ಳಲು ಉತ್ತಮ ಅವಕಾಶವನ್ನು ನೀಡುತ್ತವೆ. ಕಲೆಯ ಮೂಲಕ ಸಮಾಜದಲ್ಲಿ ಸೌಂದರ್ಯಪ್ರಜ್ಞೆ, ಸೃಜನಶೀಲತೆ ಮತ್ತು ಸಾಂಸ್ಕೃತಿಕ ಅರಿವು ಹೆಚ್ಚಿಸಲು ಸಾಧ್ಯವಾಗುತ್ತದೆ ಎಂದರು.

ವಾಸ್ತುಶಿಲ್ಪವು ನಮ್ಮ ಪರಂಪರೆ ಮತ್ತು ಸಂಸ್ಕೃತಿಯ ಪ್ರತೀಕವಾಗಿದ್ದು, ಅದನ್ನು ಸಂರಕ್ಷಿಸುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ. ಆಧುನಿಕತೆಯೊಂದಿಗೆ ಸಾಂಪ್ರದಾಯಿಕ ಕಲೆ ಮತ್ತು ವಾಸ್ತುಶಿಲ್ಪದ ಮೌಲ್ಯಗಳನ್ನು ಉಳಿಸಿಕೊಂಡು ಮುಂದಿನ ಪೀಳಿಗೆಗೆ ಪರಿಚಯಿಸುವ ಅಗತ್ಯವಿದೆ ಎಂದು ಹೇಳಿದರು.

# ಸೆ.1 ರಂದು ಬೆಂಗಳೂರಿನ ಚುನಾವಣಾ ಆಯೋಗದ ಕಛೇರಿಗೆ ಮುತ್ತಿಗೆ



ಉದಯವಾಹಿನಿ ಚಿತ್ರ

• **ಉದಯವಾಹಿನಿ ಹೊಸಪೇಟೆ.**

ರಾಜ್ಯದಲ್ಲಿ ಚುನಾವಣಾ ಆಯೋಗದ ನೇತೃತ್ವದಲ್ಲಿ ನಡೆಯುತ್ತಿರುವ ಮತದಾರರ ವಿಶೇಷ ಪಟ್ಟಿ ಪರಿಷ್ಕರಣೆ ಕಾರ್ಯವನ್ನು ವಿರೋಧಿಸಿ ಸೆ.1 ರಂದು ಬೆಂಗಳೂರಿನ ಚುನಾವಣಾ ಆಯೋಗದ ಕಛೇರಿಗೆ ಮುತ್ತಿಗೆ ಹಾಕಲಾಗುವುದು ಎಂದು ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯ ಕಾರ್ಯಾಧ್ಯಕ್ಷ ಜೆ.ಎಂ.ವೀರಸಂಗಯ್ಯ ತಿಳಿಸಿದರು.

ಸ್ಥಳೀಯ ಪತ್ರಿಕಾ ಭವನದಲ್ಲಿಂದು ಜರುಗಿದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಚುನಾವಣಾ ಆಯೋಗ ನಡೆಸುತ್ತಿರುವ ಎಸ್.ಐ.ಆರ್ ಪ್ರಕ್ರಿಯೆಯೇ ಅವೈಜ್ಞಾನಿಕವಾಗಿದೆ. ಈ ಕುರಿತು ಹಲವಾರು ಬಾರಿ ಚುನಾವಣಾ ಆಯೋಗಕ್ಕೆ ಮನವಿ ಸಲ್ಲಿಸಿದರೂ, ಆಯೋಗದಿಂದ ಈವರೆಗೆ ಯಾವುದೇ ಪ್ರತಿಕ್ರಿಯೆ ಬಂದಿಲ್ಲ. ಈ ಹಿನ್ನಲೆಯಲ್ಲಿ ಸೆ.1 ರಂದು ಕರ್ನಾಟಕ ನಾಗರಿಕ ಸಂಘಟನೆಗಳ ನೇತೃತ್ವದಲ್ಲಿ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸಿ ನಂತರ ಚುನಾವಣಾ ಆಯೋಗದ ಕಚೇರಿಗೆ ಮುತ್ತಿಗೆ ಹಾಕಿ ಬೃಹತ್ ಪ್ರತಿಭಟನೆ ನಡೆಸಲಾಗುವುದು ಎಂದರು. ತರಾತುರಿ ಎಸ್.ಐ.ಆರ್ ಪ್ರಕ್ರಿಯೆ ಯಿಂದಾಗಿ ಈಗಾಗಲೇ ಎರಡು ಬಾರಿ ಮುಂದೂಡಿಕೆ ಆಗಿದೆ. ಬಿಎಲ್‌ಒ ಗಳಿಗೆ ಸರಿಯಾದ ತರಬೇತಿ ನೀಡದ ಹಿನ್ನಲೆಯಲ್ಲಿ ರಾಜ್ಯದಲ್ಲಿ 43 ಲಕ್ಷಕ್ಕೂ ಅಧಿಕ ಅರ್ಹ ಮತದಾರರು ಮತದಾರರ ಪಟ್ಟಿಯಿಂದ ಹೊರಗುಳಿದಿದ್ದಾರೆ. ಇದನ್ನು ಯಾವುದೇ ಕಾರಣಕ್ಕೂ ಒಪ್ಪಲು ಸಾಧ್ಯವಿಲ್ಲ. ಪಾರದರ್ಶಕ ವಲ್ಲದ , ಜನಸ್ನೇಹಿ ಅಲ್ಲದ ಈ ಪ್ರಕ್ರಿಯೆ ವಿರೋಧಿಸಿ ನಡೆಯುವ ಪ್ರತಿಭಟನೆಯಲ್ಲಿ ಸಾವಿರಾರು ಜನರು ಭಾಗವಹಿಸಲಿದ್ದಾರೆ ಎಂದರು.

